# ಕಾಂಗ್ರೆಸ್ ಸರ್ಕಾರದ ವಿರುದ್ಧ ದಲಿತ ಸಂಘಟನೆಗಳ ಆಕ್ರೋಶ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಸರ್ಕಾರದಲ್ಲಿ ದಲಿತ ಸಮುದಾಯದ ರಾಜಕೀಯ ನಾಯಕರನ್ನು ಕಡೆಗಣಿಸಿರುವುದನ್ನು ಖಂಡಿಸಿ ರಾಜ್ಯ ದಲಿತ ಸಂಘಟನೆಗಳ ಒಕ್ಕೂಟ ನೇತೃತ್ವದಲ್ಲಿ 10ಕ್ಕೂ ಅಧಿಕ ಸಂಘಟನೆಗಳು ಸ್ವಾತಂತ್ರ್ಯ ಉದ್ಯಾನದಲ್ಲಿ ಗುರುವಾರ ಪ್ರತಿಭಟಿಸಿ ಆಕ್ರೋಶ ವ್ಯಕ್ತಪಡಿಸಿದ್ದವು. ಶೋಷಿತರ ಸ್ವಾಭಿಮಾನದ ಹೋರಾಟ ಎಂಬ ಹೆಸರಿನಲ್ಲಿ ನಡೆದ ರಾಜ್ಯಮಟ್ಟದ ಪ್ರತಿಭಟನೆಗೆ ದಲಿತ ಸಂಘಟನೆಗಳ ಹತ್ತಾರು ಪ್ರಮುಖ ನಾಯಕರು, ಕರ್ನಾಟಕದ ಛಲವಾದಿ ಮಹಾಸಭಾದ ಪದಾಧಿಕಾರಿಗಳು ಬೆಂಬಲ ವ್ಯಕ್ತಪಡಿಸಿ ಕಾಂಗ್ರೆಸ್ ವಿರುದ್ಧ ಘೋಷಣೆ ನಮ್ಮ ಬೇಡಿಕೆ ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯವ್ಯಾಪಿ



ಉದಯವಾಹಿನಿ ಚಿತ್ರ

ಉಗ್ರ ಹೋರಾಟ ಮಾಡಲಾಗುವುದು. ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಕಾಂಗ್ರೆಸ್ಸಿನ ದಲಿತ ವಿರೋಧಿ ನೀತಿಗೆ ಮತಗಳ ಮೂಲಕ ತಕ್ಕ ಪಾಠ ಕಲಿಸಲಾಗುವುದು ಎಂದು ಸಂಘಟನೆಗಳ ಮುಖಂಡರು, ಕಾಂಗ್ರೆಸ್ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದರು.

ಉರಿಲಿಂಗ ಪೆದ್ದಿಮಠದ ಶ್ರೀ ಜ್ಞಾನಪ್ರಕಾಶ್ ಸ್ವಾಮೀಜಿ ಮಾತನಾಡಿ, ಸಿಎಂ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ನೂತನ ಸಚಿವ ಸಂಪುಟ ರಚನೆಯಾಗಿದೆ. ಕಾಂಗ್ರೆಸ್ಸಿನ ಬೆನ್ನೆಲುಬಾಗಿ ನಿಲ್ಲುತ್ತಾ ಬಂದಿರುವ ದಲಿತ ಸಮುದಾಯದ ರಾಜಕೀಯ ನಾಯಕರನ್ನು ತುಳಿಯುವ ಕೆಲಸವಾಗುತ್ತಿದೆ. ದಿ. ಬಿ. ಬಸವಲಿಂಗಪ್ಪ, ಕೆ.ಎಚ್. ರಂಗನಾಥ್, ಬಿ.ರಾಚಯ್ಯ, ಎನ್. ರಾಚಯ್ಯ, ಶ್ರೀನಿವಾಸ್ ಪ್ರಸಾದ್ ಮತ್ತು ಟಿ.ಎ. ನರಸಿಂಹಮೂರ್ತಿ ಅವರಂತಹ ಹತ್ತಾರು ಪ್ರಭಾವಿ ಮುಖಂಡರಿಗೆ ಈ ಹಿಂದೆ ಅನ್ಯಾಯ ಮಾಡಲಾಗಿತ್ತು. ಈಗ ಮಲ್ಲಿಕಾರ್ಜುನ ಖರ್ಗೆ, ಡಾ.ಜಿ. ಪರಮೇಶ್ವರ್, ಡಾ. ಎಚ್.ಸಿ. ಮಹದೇವಪ್ಪ ಹಾಗೂ ಕೆ.ಎಚ್. ಮುನಿಯಪ್ಪ ಅವರಂತಹ ಹಿರಿಯ ನಾಯಕರನ್ನು ಸಿಎಂ ಹುದ್ದೆಗೆ ಪರಿಗಣಿಸದೆ ಕಾಂಗ್ರೆಸ್ ಸತತವಾಗಿ ದಲಿತ ವಿರೋಧಿ ಧೋರಣೆ ಮುಂದುವರಿಸಲಾಗಿದೆ ಎಂದು ಅಸಮಾಧಾನ ಹೊರಹಾಕಿದರು.

**ಸ್ವಾಮೀಜಿ ಎಚ್ಚರಿಕೆ**

ಹಿರಿಯ ನಾಯಕರಾದ ಎಚ್.ಸಿ. ಮಹದೇವಪ್ಪನವರನ್ನು ಸಚಿವ ಸಂಪುಟದಿಂದ ಕೈಬಿಟ್ಟಿರುವುದು ಅತ್ಯಂತ ದುರದೃಷ್ಟಕರ ಸಂಗತಿಯಾಗಿದೆ. ಸಮುದಾಯದ ನಾಯಕತ್ವವನ್ನು ಹತ್ತಿಕ್ಕುವ ಮತ್ತು ನಾಶಮಾಡುವ ವ್ಯವಸ್ಥಿತ ಪ್ರಯತ್ನವಾಗಿದೆ. ನಾಯಕತ್ವ ನಾಶವಾದರೆ ಇಡೀ ಸಮುದಾಯವೇ ಅಸ್ತಿತ್ವ ಕಳೆದುಕೊಳ್ಳುತ್ತದೆ ಎಂದು ಸ್ವಾಮೀಜಿ ಎಚ್ಚರಿಸಿದರು.

## ಗೊರಗುಂಟೆಪಾಳ್ಯ ಬಳಿ ಬೈಕಿಗೆ ಲಾರಿ ಡಿಕ್ಕಿ; ಇಬ್ಬರು ಸ್ಥಳದಲ್ಲೇ ಸಾವು

• ಉದಯವಾಹಿನಿ,ಬೆಂಗಳೂರು

ರಾಜಧಾನಿ ಬೆಂಗಳೂರಿನ ಗೊರಗುಂಟೆಪಾಳ್ಯದ ಟಿಎಂಟಿ ಜಂಕ್ಷನ್ ಬಳಿ ಬೈಕಿಗೆ ಲಾರಿ ಡಿಕ್ಕಿ ಹೊಡೆದಿದ್ದು, ಭೀಕರ ಅಪಘಾತದಲ್ಲಿ ಇಬ್ಬರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಗುರುವಾರ ನಡೆದಿದೆ. ಇಂದು ಟಿಎಂಟಿ ಜಂಕ್ಷನ್ ಬಳಿ ಗ್ಯಾಸ್ ಸಿಲಿಂಡರ್ ತುಂಬಿದ್ದ ಗೂಡ್ಸ್ ಲಾರಿಯೊಂದು ಬೈಕಿಗೆ ಡಿಕ್ಕಿ ಹೊಡೆದಿದ್ದು, ಬೈಕ್ ನಲ್ಲಿದ್ದ ಓರ್ವ ಮಹಿಳೆ ಮತ್ತು ಪುರುಷ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.ಸದ್ಯ ಸ್ಥಳಕ್ಕೆ ಯಶವಂತಪುರ ಸಂಚಾರ ಪೊಲೀಸರು ಭೇಟಿ, ಪರಿಶೀಲನೆ ನಡೆಸಿದ್ದಾರೆ.

## ಕೆ.ಆರ್. ಮಾರುಕಟ್ಟೆ ಸ್ವಚ್ಛತಾ ಕಾರ್ಯ ಚುರುಕು; ವ್ಯಾಪಾರಿಗಳಿಗೆ ಲೈನಿಂಗ್ ವ್ಯವಸ್ಥೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕೆ.ಆರ್. ಮಾರುಕಟ್ಟೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಸ್ವಚ್ಛತೆ ಮತ್ತು ಸುಗಮ ನಿರ್ವಹಣೆಗೆ ಬೆಂಗಳೂರು ಕೇಂದ್ರ ನಗರ ಪಾಲಿಕೆ ಚುರುಕುಗೊಂಡಿದೆ. ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರ ಇತ್ತೀಚಿನ ಭೇಟಿ ವೇಳೆ ನೀಡಿದ ಸೂಚನೆಗಳ ಹಿನ್ನೆಲೆಯಲ್ಲಿ ಅಭಿವೃದ್ಧಿ ಅಪರ ಆಯುಕ್ತ ವೆಂಕಟಾಚಲಪತಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಹಲವು ಮಹತ್ವದ ನಿರ್ದೇಶನಗಳನ್ನು ನೀಡಿದ್ದಾರೆ.

ಮಾರುಕಟ್ಟೆಯ ತಳಮಹಡಿಯಲ್ಲಿರುವ ಹೂವಿನ ಮಾರುಕಟ್ಟೆಯನ್ನು ಸಮಗ್ರವಾಗಿ ಸ್ವಚ್ಛಗೊಳಿಸುವಂತೆ ಸೂಚನೆ ನೀಡಲಾಗಿದೆ. ಮಾರುಕಟ್ಟೆ ಮುಂಭಾಗದಲ್ಲಿ ಕೊತ್ತಂಬರಿ ಸೊಪ್ಪು ಮಾರಾಟ ನಡೆಯುವ ಪ್ರದೇಶದಲ್ಲಿ ಮಳೆಗಾಲದಲ್ಲಿ ನೀರು ನಿಂತು ಗಲೀಜಾಗುತ್ತಿರುವ ಹಿನ್ನೆಲೆ, ಗುಂಡಿಗಳನ್ನು ಮುಚ್ಚಿ ಸಂಪೂರ್ಣ ಕಾಂಕ್ರೀಟ್ ಅಳವಡಿಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಲಾಗಿದೆ.

ಸ್ವಚ್ಛತಾ ಕಾರ್ಯವನ್ನು ಪರಿಣಾಮಕಾರಿಯಾಗಿ ನಡೆಸಲು ಹೆಚ್ಚುವರಿ ಮಾರ್ಷಲ್‌ಗಳನ್ನು ನಿಯೋಜಿಸುವಂತೆ ಸೂಚಿಸಲಾಗಿದ್ದು, ಮೊದಲ ಮಹಡಿಯಲ್ಲಿರುವ ಶೌಚಾಲಯವನ್ನು ಸಾರ್ವಜನಿಕ ಬಳಕೆಗೆ ತೆರೆಯಲು ಕ್ರಮ ಕೈಗೊಳ್ಳಲು ತಿಳಿಸಲಾಗಿದೆ. ಕೆ.ಆರ್. ಮಾರುಕಟ್ಟೆ ಕಟ್ಟಡದ ಒಳಗೆ ಹಾಗೂ ಮುಂಭಾಗದಲ್ಲಿ ಕಂಡುಬರುವ ಒತ್ತುವರಿಗಳನ್ನು ಗುರುತಿಸಿ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಮೊದಲು ಒತ್ತುವರಿದಾರರಿಗೆ ನಿಗದಿತ ಕಾಲಾವಕಾಶ ನೀಡಲಾಗುವುದು. ಆ ಅವಧಿಯಲ್ಲೂ ತೆರವುಗೊಳಿಸದಿದ್ದರೆ ಪಾಲಿಕೆಯೇ ತೆರವು ಕಾರ್ಯಾಚರಣೆ ನಡೆಸಲಿದೆ ಎಂದು ಎಚ್ಚರಿಕೆ ನೀಡಲಾಗಿದೆ. ತ್ಯಾಜ್ಯ ನಿರ್ವಹಣೆಯನ್ನು ಸುಧಾರಿಸುವ ಉದ್ದೇಶದಿಂದ ತ್ಯಾಜ್ಯ ಸಂಗ್ರಹ ಮತ್ತು ವಿಲೇವಾರಿಗೆ ಅಗತ್ಯವಾದ ಶೆಡ್ ನಿರ್ಮಾಣಕ್ಕೆ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ಜೊತೆಗೆ ಮಾರುಕಟ್ಟೆ ಮುಂಭಾಗದಲ್ಲಿ ವ್ಯಾಪಾರಿಗಳಿಗೆ ನಿಗದಿತ ವ್ಯಾಪಾರ ಸ್ಥಳಗಳನ್ನು ಗುರುತಿಸಿ ಲೈನಿಂಗ್ ವ್ಯವಸ್ಥೆ ಮಾಡಲಾಗುವುದು.

## ಆರ್‌ಎಸ್‌ಎಸ್ ನಾಯಕರು ಇತಿಹಾಸವನ್ನು ತಮ್ಮ ಅನುಕೂಲಕ್ಕೆ ತಕ್ಕಂತೆ ಸೃಷ್ಟಿಸುವುದರಲ್ಲಿ ಮುಂದು


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಗೃಹ ಸಚಿವ ಪ್ರಿಯಾಂಕ್ ಖರ್ಗೆ ಆರ್ ಎಸ್ ಎಸ್ ಮತ್ತು ಬಿಜೆಪಿ ವಿರುದ್ಧ ವಾಗ್ದಾಳಿ ಮುಂದುವರಿಸಿದ್ದಾರೆ. ನನ್ನ ಪ್ರಶ್ನೆ ತರ್ಕಬದ್ಧವಾಗಿಲ್ಲವೇ ಅಥವಾ ಸಂವಿಧಾನಾತ್ಮಕವಾಗಿಲ್ಲವೇ ಅಥವಾ ಕಾನೂನಿಗೆ ವಿರುದ್ಧವಾಗಿದೆಯೇ ಎಂದು ಕೇಳಿದ್ದಾರೆ. ಬೆಂಗಳೂರಿನಲ್ಲಿ ಬಿಜೆಪಿ ನಾಯಕರ ಟೀಕೆಗೆ ಉತ್ತರಿಸಿದ ಸಚಿವ ಪ್ರಿಯಾಂಕ್ ಖರ್ಗೆ, ನಾನು ವಿಷಯಾಂತರ ಮಾಡಲು ಇಚ್ಛಿಸುವುದಿಲ್ಲ, ರಾಜ್ಯಪಾಲರ ಬಳಿಗೆ ಹೋದರೆ ಸಮಸ್ಯೆ ಬಗೆಹರಿಯುವುದಿಲ್ಲ, ಬಿಜೆಪಿಯವರು ಮಾಧ್ಯಮಗಳ ಮುಂದೆ ಬಂದು ದಾಖಲೆಗಳನ್ನು ತೋರಿಸಲಿ, ಜನರಿಗೆ ತೋರಿಸಲಿ. ಬೆಂಗಳೂರಿನಲ್ಲಿ ಕಸ ಸಂಗ್ರಹಣೆ ಮತ್ತು ತ್ಯಾಜ್ಯ ವಿಲೇವಾರಿ ಮಾಡುವ ನೆಪದಲ್ಲಿ ಕಾಂಗ್ರೆಸ್ ಸರ್ಕಾರ 39,000 ಕೋಟಿ ಹಗರಣ ನಡೆಸಿದೆ ಎಂದು ಆರೋಪಿಸುತ್ತಿರುವ ಬಿಜೆಪಿ ನಾಯಕರು ಜನರ ಮುಂದೆ ಬಂದು ತೋರಿಸಲಿ ಎಂದು ಸಚಿವ ಪ್ರಿಯಾಂಕ್ ಖರ್ಗೆ ಸವಾಲು ಹಾಕಿದರು. ನಾವು ವೈಜ್ಞಾನಿಕವಾಗಿ ಕಸ ಸಂಗ್ರಹಣೆ, ವಿಲೇವಾರಿ ಮಾಡುತ್ತಿದ್ದೇವೆ ಎಂದರು.

## ರೈತರ ಬಗ್ಗೆ ಅವಹೇಳನಕಾರಿ ಹೇಳಿಕೆ: ಕೆ ಆರ್ ಎಸ್ ಅಧ್ಯಕ್ಷ ರವಿ ಕೃಷ್ಣಾ ರೆಡ್ಡಿ ವಿರುದ್ಧ ಕೇಸು ದಾಖಲು

• ಉದಯವಾಹಿನಿ, ಬೆಂಗಳೂರು

ಬಿಡದಿ ಟೌನ್‌ಶಿಪ್ ಯೋಜನೆಗೆ ತಮ್ಮ ಜಮೀನನ್ನು ನೀಡಲು ಒಪ್ಪಿಕೊಂಡ ರೈತರ ಬಗ್ಗೆ ಸಾರ್ವಜನಿಕವಾಗಿ ಅವಹೇಳನಕಾರಿ ಪದಗಳನ್ನು ಬಳಸಿದ ಆರೋಪದ ಮೇಲೆ ಕರ್ನಾಟಕ ರಾಷ್ಟ್ರ ಸಮಿತಿ (ಏಖಖ) ಪಕ್ಷದ ಅಧ್ಯಕ್ಷ ರವಿ ಕೃಷ್ಣಾ ರೆಡ್ಡಿ ವಿರುದ್ಧ ಬೆಂಗಳೂರು ದಕ್ಷಿಣ ಜಿಲ್ಲಾ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಜೂನ್ 8ರಂದು ಬಿಡದಿ ಪೊಲೀಸ್ ಠಾಣೆಯಲ್ಲಿ ರಾಜಣ್ಣ ಎಚ್.ಸಿ. ಎಂಬುವವರು ನೀಡಿದ ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಿಸಲಾಗಿದೆ.

ದೂರಿನಲ್ಲಿ ರಾಜಣ್ಣ ಅವರು, ಬಿಡದಿ ಟೌನ್‌ಶಿಪ್ ಯೋಜನೆಗಾಗಿ ತಮ್ಮ ಜಮೀನು ಸ್ವಾಧೀನಕ್ಕೆ ನೀಡಲು ಒಪ್ಪಿಕೊಂಡ ರೈತರಲ್ಲಿ ತಾವೂ ಒಬ್ಬರು ಎಂದು ತಿಳಿಸಿದ್ದಾರೆ. ಭೈರಮಂಗಲ ಗ್ರಾಮದಲ್ಲಿ ರೈತರ ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಿದ್ದ ವೇಳೆ ರವಿ ಕೃಷ್ಣಾ ರೆಡ್ಡಿ ಅವಹೇಳನಕಾರಿ ಭಾಷೆ ಬಳಸಿದ್ದಾರೆ ಎನ್ನಲಾಗಿದೆ. ಜಮೀನು ನೀಡಲು ಒಪ್ಪಿದ ರೈತರನ್ನು ಅವರು ''ರಾಕೆಟಿಯರ್‌ಗಳು ರಿಯಲ್ ಎಸ್ಟೇಟ್ ಏಜೆಂಟ್‌ಗಳು ಎಂದು ಕರೆದಿದ್ದಾರೆ ಎಂದು ಆರೋಪಿಸಲಾಗಿದೆ. ಪೊಲೀಸರು ಆರಂಭದಲ್ಲಿ ಈ ಪ್ರಕರಣವನ್ನು ನಾನ್-ಕಾಗ್ನಿಜಬಲ್ ರಿಪೋರ್ಟ್) ಆಗಿ ದಾಖಲಿಸಿದ್ದರು. ಬಳಿಕ ನ್ಯಾಯಾಲಯದ ಅನುಮತಿ ಪಡೆದು ಅದನ್ನು ಎಫ್‌ಐಆರ್ ಆಗಿ ಪರಿವರ್ತಿಸಿದ್ದಾರೆ.ರವಿ ಕೃಷ್ಣಾ ರೆಡ್ಡಿ ವಿರುದ್ಧ ಭಾರತೀಯ ನ್ಯಾಯ ಸಂಹಿತೆ ಸೆಕ್ಷನ್ 352 ಅಡಿಯಲ್ಲಿ ಶಾಂತಿ ಭಂಗವಾಗುವ ಉದ್ದೇಶದಿಂದ ಉದ್ದೇಶಪೂರ್ವಕವಾಗಿ ಅವಮಾನ ಮಾಡುವುದು ಪ್ರಕರಣ ದಾಖಲಿಸಲಾಗಿದೆ.

# ಪೊಲೀಸರಿಗೆ ಎಚ್ಚರಿಕೆ ನೀಡಿದ ಗೃಹ ಸಚಿವರು

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಬೆಂಗಳೂರಿನ ಟ್ರಾಫಿಕ್ ಸಮಸ್ಯೆ ಒಂದು ಜಟಿಲವಾದ ಸವಾಲು. ಕೇವಲ ರಸ್ತೆಗಳ ವಿಸ್ತರಣೆ ಅಥವಾ ಹೊಸ ಮೇತುವೆಗಳ ನಿರ್ಮಾಣದಿಂದ ಮಾತ್ರ ಈ ಸಮಸ್ಯೆ ಬಗೆಹರಿಯದು ಎಂಬ ವಾಸ್ತವವನ್ನು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಒಪ್ಪಿಕೊಂಡಿದ್ದು, ಬೆಂಗಳೂರು ಅರ್ಬನ್ ಮೊಬಿಲಿಟಿ ಮಿಷನ್‌ನ ಸ್ಥಾಪನೆ ಮಾಡುವ ತೀರ್ಮಾನ ಕೈಗೊಂಡಿದ್ದಾರೆ. ಈ ಮಿಷನ್ ಕೇವಲ ಮೂಲಸೌಕರ್ಯಕ್ಕೆ ಸೀಮಿತವಾಗದೆ, ವ್ಯವಸ್ಥಿತ ಲೋಪದೋಷಗಳನ್ನು ಸರಿಪಡಿಸುವ ಗುರಿಯನ್ನು ಹೊಂದಿದೆ. ಬಿಎಂಟಿಸಿ, ಬಿಎಂಆರ್‌ಸಿಎಲ್ ಮತ್ತು ಖಾಸಗಿ ಸಾರಿಗೆ ಪಾಲುದಾರರೊಂದಿಗೆ ಸಮನ್ವಯ ಸಾಧಿಸಿ, ಸಾರ್ವಜನಿಕ ಸಾರಿಗೆಯನ್ನು ಹೆಚ್ಚು ಪರಿಣಾಮಕಾರಿಯಾಗಿಸಲು ಈ ತಂಡ ಕೆಲಸ ಮಾಡಲಿದೆ. ಮುಂದಿನ 2–3 ದಿನಗಳಲ್ಲಿ ಈ ಯೋಜನೆಯ ಸಂಪೂರ್ಣ ನೀಲಿ ನಕ್ಷೆ ಬಿಡುಗಡೆಯಾಗಲಿದ್ದು, ಇದು ಸಂಚಾರ ದಟ್ಟಣೆಯನ್ನು ವೈಜ್ಞಾನಿಕವಾಗಿ ನಿರ್ವಹಿಸುವ ನಿಟ್ಟಿನಲ್ಲಿ ಮೈಲಿಗಲ್ಲಾಗಲಿದೆ.

ಪೊಲೀಸ್ ವ್ಯವಸ್ಥೆಯು ಸಮಾಜದ ಭರವಸೆಯ ಕೇಂದ್ರ. ಆದರೆ, ಇತ್ತೀಚಿನ ದಿನಗಳಲ್ಲಿ ಕೆಳಹಂತದ ಪೊಲೀಸ್ ಸಿಬ್ಬಂದಿಗಳು ರೌಡಿಗಳೊಂದಿಗೆ ಹೊಂದಿರುವ ಅತಿನಿಕಟ ಸಂಬಂಧದ ಕುರಿತು ಸಾರ್ವಜನಿಕವಾಗಿ ಟೀಕೆಗಳು ವ್ಯಕ್ತವಾಗಿದ್ದವು.

ಸಚಿವರು ಇದನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದಾರೆ. ಪ್ರತಿಯೊಂದು ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ 'ಆಂಟಿ ರೌಡಿ ಸ್ಕ್ವ್ಯಾಡ್'ಗಳನ್ನು ಬಲಪಡಿಸಲಾಗುವುದು. ಪೊಲೀಸ್ ಅಧಿಕಾರಿಗಳು ರೌಡಿಗಳ ಜನ್ಮದಿನದ ಆಚರಣೆಗಳಲ್ಲಿ ಭಾಗವಹಿಸುವುದು, ಅವರೊಂದಿಗೆ ಊಟದ ಮೇಜಿನ ಹಂಚಿಕೊಳ್ಳುವುದು ಅಥವಾ ಸಾರ್ವಜನಿಕವಾಗಿ ಅವರೊಂದಿಗೆ ಫೋಟೋ, ಸೆಲ್ಫಿ ತೆಗೆದುಕೊಳ್ಳುವಂತಹ ಚಟುವಟಿಕೆಗಳಿಗೆ ಸಂಪೂರ್ಣ ನಿರ್ಬಂಧ ವಿಧಿಸಲಾಗಿದೆ.

ಇಂತಹ ಕೃತ್ಯಗಳಲ್ಲಿ ತೊಡಗುವ ಅಧಿಕಾರಿಗಳ ವಿರುದ್ಧ ಕಠಿಣ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಲಾಗಿದೆ.

ಪೊಲೀಸ್ ಮತ್ತು ಸಮಾಜಘಾತುಕ ಶಕ್ತಿಗಳ ನಡುವಿನ ಅಂತರವು ಭದ್ರತೆಯ ದೃಷ್ಟಿಯಿಂದ ಅತ್ಯಗತ್ಯ ಎಂಬುದನ್ನು ಸ್ಪಷ್ಟಪಡಿಸಿದ್ದಾರೆ.

**ಸೈಬರ್ ಅಪರಾಧಗಳ ತಡೆ:** ಬೆಂಗಳೂರು ಜಾಗತಿಕ ಮಟ್ಟದಲ್ಲಿ 4ನೇ ಅತಿ ದೊಡ್ಡ ತಂತ್ರಜ್ಞಾನ ಕ್ಲಸ್ಟರ್ ಆಗಿರುವ ಕಾರಣ, ಇಲ್ಲಿ ಸೈಬರ್ ಅಪರಾಧಿಗಳ ಸಂಖ್ಯೆಯೂ ಹೆಚ್ಚಿದೆ. ಈ ಸಮಸ್ಯೆಯನ್ನು ನಿಭಾಯಿಸಲು ಐಟಿ-ಬಿಟಿ ಇಲಾಖೆ ಮತ್ತು ಗೃಹ ಇಲಾಖೆಗಳ ನಡುವೆ ಸೇತುವೆ ನಿರ್ಮಿಸಲಾಗುವುದು.

ಸೈಬರ್ ಸುರಕ್ಷತೆಯನ್ನು ಖಾಸಗಿ ತಂತ್ರಜ್ಞಾನ ಸಂಸ್ಥೆಗಳ ಸಹಭಾಗಿತ್ವದೊಂದಿಗೆ ಬಲಪಡಿಸಲಾಗುವುದು. ಮುಂದಿನ ವಾರ ನಡೆಯಲಿರುವ ಉನ್ನತ ಮಟ್ಟದ ಸಭೆಯಲ್ಲಿ, 'ಸೇಫ್ಟಿ ಗಾರ್ಡ್ ರೈಲ್ಸ್' ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುವ ಬಗ್ಗೆ ಚರ್ಚಿಸಲಾಗುವುದು. ಇದು ಸೈಬರ್ ವಂಚನೆಗಳನ್ನು ತಡೆಯುವಲ್ಲಿ ಮತ್ತು ನಾಗರಿಕರ ಡಿಜಿಟಲ್ ಆಸ್ತಿಯನ್ನು ರಕ್ಷಿಸುವಲ್ಲಿ ಹೊಸ ಭರವಸೆ ಮೂಡಿಸಲಿದೆ ಎಂದರು.

**ಬೆಂಗಳೂರು ಮೊಬಿಲಿಟಿ ಮಿಷನ್**

ಬೆಂಗಳೂರು ನಗರದ ಪ್ರಮುಖ ಸಮಸ್ಯೆಯಾದ ಟ್ರಾಫಿಕ್ ದಟ್ಟಣೆಯನ್ನು ಕೇವಲ ಮೂಲ ಸೌಕರ್ಯ ಬದಲಾವಣೆಯಿಲ್ಲದೇ, ವ್ಯವಸ್ಥಿತ ಲೋಪದೋಷಗಳನ್ನು ಸರಿಪಡಿಸುವ ಮೂಲಕ ನಿರ್ವಹಿಸಲು ನಿರ್ಧರಿಸಲಾಗಿದೆ. ಇದಕ್ಕಾಗಿ ಬಿಎಂಟಿಸಿ , ಬಿಎಂಆರ್‌ಸಿಎಲ್ ಮತ್ತು ಖಾಸಗಿ ಸಹಭಾಗಿತ್ವದೊಂದಿಗೆ 'ಬೆಂಗಳೂರು ಅರ್ಬನ್ ಮೊಬಿಲಿಟಿ ಮಿಷನ್' ತಂಡವನ್ನು ರಚಿಸಲಾಗುವುದು.

ಇದರ ಸಂಪೂರ್ಣ ನೀಲಿ ನಕ್ಷೆಯನ್ನು ಮುಂದಿನ 2-3 ದಿನಗಳಲ್ಲಿ ಪ್ರಕಟಿಸಲಾಗುವುದು ಎಂದು ತಿಳಿಸಿದರು.

**ಮಾದಕ ದ್ರವ್ಯ ಮುಕ್ತ ಬೆಂಗಳೂರು**

ಡ್ರಗ್ಸ್ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಗೃಹ ಇಲಾಖೆಯು ಯುದ್ಧೋಪಾದಿಯಲ್ಲಿ ಕೆಲಸ ಮಾಡುತ್ತಿದೆ. ನೆರೆ ರಾಜ್ಯಗಳಿಂದ ಬರುವ ಸಣ್ಣ ಪ್ರಮಾಣದ ಸೈಕೋಟ್ರೋಪಿಕ್ ಮಾತ್ರೆಗಳನ್ನು ನಿಯಂತ್ರಿಸಲು, ರಾಜ್ಯದ ಗಡಿ ಭಾಗಗಳಲ್ಲಿ ಅತ್ಯಾಧುನಿಕ ಟೆಸ್ಟಿಂಗ್ ಕಿಟ್‌ಗಳನ್ನು ಅಳವಡಿಸಲು ನಿರ್ಧರಿಸಲಾಗಿದೆ. ಅಲ್ಲದೆ, ನಗರದಲ್ಲಿ ನೆಲೆಸಿರುವ ವಿದೇಶಿ ಪ್ರಜೆಗಳ ಮೇಲೆ ನಿಗಾ ವಹಿಸಲು ಮತ್ತು ಕಾನೂನುಬಾಹಿರವಾಗಿ ವಾಸ್ತವ್ಯ ಹೂಡಿದವರನ್ನು ಗಡಿಪಾರು ಮಾಡುವ ಪ್ರಕ್ರಿಯೆಯನ್ನು ವೇಗಗೊಳಿಸಲು ಕೇಂದ್ರ ವಿದೇಶಾಂಗ ಸಚಿವಾಲಯದೊಂದಿಗೆ ಚರ್ಚಿಸಲಾಗುತ್ತಿದೆ. ಜಾಗತಿಕ ಮಟ್ಟದ ಅತ್ಯುತ್ತಮ ಪೊಲೀಸ್ ಮಾದರಿಗಳನ್ನು ಅಧ್ಯಯನ ಮಾಡಿ, ಮುಂದಿನ ಎರಡು ವಾರಗಳಲ್ಲಿ ಮಾದಕ ದ್ರವ್ಯ ತಡೆಗೆ ಸಮಗ್ರ ನೀಲಿ ನಕ್ಷೆಯನ್ನು ರೂಪಿಸಲಾಗುವುದು ಎಂದು ತಿಳಿಸಿದರು.

ನ್ಯಾಯಾಲಯಗಳಲ್ಲಿ ಪ್ರಕರಣಗಳು ದಶಕಗಳ ಕಾಲ ಬಾಕಿ ಉಳಿಯಲು ಪ್ರಮುಖ ಕಾರಣ ಚಾರ್ಜ್ ಶೀಟ್ ಸಲ್ಲಿಕೆಯಲ್ಲಿನ ವಿಳಂಬ.

ದೂರು ದಾಖಲಾದ ನಂತರ ಉದ್ದೇಶಪೂರ್ವಕವಾಗಿ ಅಥವಾ ನಿರ್ಲಕ್ಷ್ಯದಿಂದ ಚಾರ್ಜ್ ಶೀಟ್ ಸಲ್ಲಿಸದ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಸಚಿವರು ನಿರ್ದೇಶಿಸಿದ್ದಾರೆ. ಪ್ರಾಸಿಕ್ಯೂಷನ್‌ನಲ್ಲಿ ತಾರತಮ್ಯ ಎಸಗುವ ಅಥವಾ ತನಿಖೆಯಲ್ಲಿ ವಿಳಂಬ ಮಾಡುವ ಪ್ರತಿಯೊಂದು ಘಟನೆಯನ್ನು ಮೇಲ್ವಿಚಾರಣೆ ಮಾಡಲಾಗುವುದು ಎಂದರು.

# ರಾಜ್ಯ ಆಡಳಿತದ ಕಾರ್ಯಕ್ಷಮತೆಗೆ ಒತ್ತು: ಜೂನ್ 13ರಂದು ಮಹತ್ವದ ಸಭೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಅಧಿಕಾರ ಸ್ವೀಕರಿಸಿದ ಬಳಿಕ ರಾಜ್ಯದ ಜಿಲ್ಲಾಡಳಿತದೊಂದಿಗೆ ನಡೆಸುತ್ತಿರುವ ಮೊದಲ ಮಹತ್ವದ ಸಮಾಲೋಚನಾ ಸಭೆ ಜೂನ್ 13ರಂದು ವಿಧಾನಸೌಧದಲ್ಲಿ ನಡೆಯಲಿದೆ. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು (ಡಿಸಿ) ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ (ಸಿಇಒ) ಜೊತೆ ಪರಿಶೀಲನಾ ಸಭೆ ನಡೆಸಲು ಮುಖ್ಯಮಂತ್ರಿ ನಿರ್ಧರಿಸಿದ್ದಾರೆ.ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿನ ಸಿದ್ಧತೆ, ಅಭಿವೃದ್ಧಿ ಕಾಮಗಾರಿಗಳ ಪ್ರಗತಿ, ಸರ್ಕಾರದ ಪ್ರಮುಖ ಯೋಜನೆಗಳ ಅನುಷ್ಠಾನ ಹಾಗೂ ಜಿಲ್ಲಾಮಟ್ಟದಲ್ಲಿ ಆಡಳಿತಾತ್ಮಕ ಸಮನ್ವಯ ಕುರಿತು ಸಭೆಯಲ್ಲಿ ಪರಿಶೀಲನೆ ನಡೆಸಲಿದ್ದಾರೆಂದು ಮೂಲಗಳು ತಿಳಿಸಿವೆ.

ಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಯೋಜನೆಗಳ ಅನುಷ್ಠಾನ, ಮೂಲಸೌಕರ್ಯ ಕಾಮಗಾರಿಗಳ ವೇಗ, ಅನುದಾನ ಬಳಕೆ ಹಾಗೂ ಜನಪರ ಯೋಜನೆಗಳ ಪರಿಣಾಮಕಾರಿ ಜಾರಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸ್ಪಷ್ಟ ನಿರ್ದೇಶನ ನೀಡುವ ಸಾಧ್ಯತೆ ಇದೆ.


ಸಭೆಯಲ್ಲಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಸಿಇಒಗಳು ಹಾಗೂ ಹಿರಿಯ ಅಧಿಕಾರಿಗಳ ಭಾಗವಹಿಸಲಿದ್ದು, ಆಡಳಿತದಲ್ಲಿ ಸಮಗ್ರ ಸಮನ್ವಯಕ್ಕೆ ಒತ್ತು ನೀಡುವ ಪ್ರಯತ್ನ ನಡೆಯಲಿದೆ ಎಂದು ತಿಳಿದುಬಂದಿದೆ. ಇತ್ತೀಚೆಗೆ ಆಡಳಿತಾತ್ಮಕ ಮಟ್ಟದಲ್ಲಿ ಹಲವು ಮಹತ್ವದ ಬದಲಾವಣೆಗಳನ್ನು ಕೈಗೊಂಡಿರುವ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಆಡಳಿತದ ವೇಗ ಹೆಚ್ಚಿಸಲು ಒತ್ತು ನೀಡುತ್ತಿದ್ದಾರೆ.

**ಹೊಸ ಚೈತನ್ಯ ನೀಡಲು ಮುಂದು**

ಗುಪ್ತಚರ ವಿಭಾಗದ ಮುಖ್ಯಸ್ಥರ ನೇಮಕ ಸೇರಿದಂತೆ ಹಲವು ಪ್ರಮುಖ ಹುದ್ದೆಗಳಲ್ಲಿ ಬದಲಾವಣೆಗಳನ್ನು ಮಾಡಿರುವ ಸರ್ಕಾರ, ಅಭಿವೃದ್ಧಿ ಕಾರ್ಯಗಳ ಅನುಷ್ಠಾನಕ್ಕೆ ಹೊಸ ಚೈತನ್ಯ ನೀಡಲು ಮುಂದಾಗಿದೆ ಎಂದು ರಾಜಕೀಯ ವಿಶ್ಲೇಷಕ ಬಿ.ಎಸ್. ಮೂರ್ತಿ ಅವರು ಹೇಳಿದ್ದಾರೆ.

## ಸರ್ಕಾರಿ ನೌಕರನ ವೈಯಕ್ತಿಕ ಆಸ್ತಿ ವಿವರ ಆರ್‌ಟಿಐ ಅಡಿ ನೀಡಲಾಗದು: ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಆರೋಪಗಳು ಎಷ್ಟೇ ಗಂಭೀರವಾಗಿದ್ದರು ವ್ಯಕ್ತಿಯ ವೈಯಕ್ತಿಕ ಮಾಹಿತಿಯನ್ನು ಸಾರ್ವಜನಿಕ ಮಾಹಿತಿಯಾಗಿ ಪರಿವರ್ತಿಸಲು ಸಾಧ್ಯವಿಲ್ಲ ಎಂದು ಅಭಿಪ್ರಾಯ ಪಟ್ಟಿರುವ ಹೈಕೋರ್ಟ್, ಒಬ್ಬ ವ್ಯಕ್ತಿಯು ಸರ್ಕಾರಿ ಅಧಿಕಾರಿಯಾಗಿದ್ದ ಮಾತ್ರಕ್ಕೆ ಆತನ ವೈಯಕ್ತಿಕ ಆಸ್ತಿ ಮತ್ತು ಜವಾಬ್ದಾರಿಗಳ ವಿವರಗಳನ್ನು ಮಾಹಿತಿ ಹಕ್ಕು ಕಾಯ್ದೆ (ಆರ್‌ಟಿಐ)ಯಡಿ ಬಹಿರಂಗಪಡಿಸಲು ಸಾಧ್ಯವಿಲ್ಲ ಎಂದು ಹೈಕೋರ್ಟ್ ಆದೇಶಿಸಿದೆ.

ಅಲ್ಲದೆ, ಸಾರ್ವಜನಿಕ ಹಿತಾಸಕ್ತಿ ಇಲ್ಲದ ವೈಯಕ್ತಿಕ ಮಾಹಿತಿಗಳನ್ನು ಆರ್‌ಟಿಐ ಕಾಯ್ದೆಯ ಸೆಕ್ಷನ್ 8(1)(ಜೆ) ಅಡಿಯಲ್ಲಿ ವಿನಾಯಿತಿ ನೀಡಲಾಗಿದ್ದು, ಇಂತಹ ಮಾಹಿತಿಗಳನ್ನು ಒದಗಿಸುವಂತೆ ಒತ್ತಾಯಿಸುವುದಕ್ಕೆ ಕಾನೂನಿನಲ್ಲಿ ಅವಕಾಶವಿಲ್ಲ ಎಂದು ನ್ಯಾಯಪೀಠ ತಿಳಿಸಿದೆ.

ಸರ್ಕಾರಿ ನೌಕರನ ಖಾಸಗಿ ಮಾಹಿತಿ ಒದಗಿಸಲು ನಿರಾಕರಿಸಿದ್ದ ಮಾಹಿತಿ ಆಯೋಗದ ಆದೇಶವನ್ನು ಪ್ರಶ್ನಿಸಿ ಬೆಂಗಳೂರಿನ ನಿವಾಸಿಯಾಗಿರುವ ಎಸ್ ಸಾವಿತ್ರಮ್ಮ ಎಂಬುವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ಏಕ ಸದಸ್ಯ ಪೀಠ, ಈ ಆದೇಶ ನೀಡಿದ್ದು, ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿದೆ. ಒಬ್ಬ ವ್ಯಕ್ತಿ ಸರ್ಕಾರಿ ನೌಕರನಾದ ತಕ್ಷಣ ಆತನ ಪ್ರತಿಯೊಂದು ವೈಯಕ್ತಿಕ ಮಾಹಿತಿಯೂ ಸಾರ್ವಜನಿಕ ಆಸ್ತಿಯಾಗುವುದಿಲ್ಲ. ಅವರ ಉದ್ಯೋಗದ ಕಾರಣಕ್ಕೆ ಸಂಸತ್ತು ನೀಡಿದ ಗೌಪ್ಯತೆಯ ಹಕ್ಕಿನ ರಕ್ಷಣೆಯನ್ನು ಕಸಿದುಕೊಳ್ಳಲು ಸಾಧ್ಯವಿಲ್ಲ. ಅರ್ಜಿದಾರರು ಮತ್ತು ಸದರಿ ಅಧಿಕಾರಿಯ ನಡುವೆ ಇರುವುದು ಖಾಸಗಿ ಜಮೀನು ವಿವಾದ. ಅರ್ಜಿದಾರರ ವೈಯಕ್ತಿಕ ಕಾನೂನು ಹೋರಾಟಕ್ಕೆ ಪೂರಕವಾಗುವ ಉದ್ದೇಶ 'ಬೃಹತ್ ಸಾರ್ವಜನಿಕ ಹಿತಾಸಕ್ತಿ' ವ್ಯಾಪ್ತಿಗೆ ಬರುವುದಿಲ್ಲ. ಕೇವಲ ಒಬ್ಬ ವ್ಯಕ್ತಿಯ ಮೇಲೆ ಗಂಭೀರ ಆರೋಪಗಳನ್ನು ಮಾಡಿದ ತಕ್ಷಣ ಅವರ ವೈಯಕ್ತಿಕ ದಾಖಲೆಗಳನ್ನು ಆರ್‌ಟಿಐ ಮೂಲಕ ಪಡೆಯಲು ಅವಕಾಶ ನೀಡಿದರೆ, ಕಾಯ್ದೆಯ ಮೂಲ ಉದ್ದೇಶವೇ ಬುಡಮೇಲಾಗಲಿದೆ ಎಂದು ಎಚ್ಚರಿಸಿದೆ. ಅಲ್ಲದೆ, ಈ ರೀತಿಯ ಮಾಹಿತಿಯನ್ನು ಬಿಡುಗಡೆ ಮಾಡಲು ಭ್ರಷ್ಟಾಚಾರ ಬಯಲಿಗೆಳೆಯುವ ಅಥವಾ ಸಾರ್ವಜನಿಕ ಹಣದ ದುರುಪಯೋಗ ಸಾಬೀತುಪಡಿಸುವ ಬಲವಾದ ಸಾಕ್ಷ್ಯಗಳು ಇರಬೇಕು.

## ಪದತ್ಯಾಗಕ್ಕೂ ಮುನ್ನ ಕುರುಬ ಸಮುದಾಯಕ್ಕೆ ಸಿದ್ದರಾಮಯ್ಯ ಭರ್ಜರಿ ಗಿಫ್ಟ್

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಕಾಂಗ್ರೆಸ್ ನಾಯಕ ಸಿದ್ದರಾಮಯ್ಯ ಅವರು ಪದತ್ಯಾಗಕ್ಕೂ ಮುನ್ನವೇ ಕುರುಬ ಸಮುದಾಯಕ್ಕೆ ಭರ್ಜರಿ ಗಿಫ್ಟ್ ನೀಡಿದ್ದು, ಮುಖ್ಯಮಂತ್ರಿ ಹುದ್ದೆಯಿಂದ ಕೆಳಗಿಳಿಯುವ ತರಾತುರಿಯಲ್ಲೇ ಕುರುಬ ಸಮುದಾಯಕ್ಕೆ ಅನುದಾನ ಬಿಡುಗಡೆ ಮಾಡಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ.

ನೂತನ ಸಿಎಂ ಡಿಕೆ ಶಿವಕುಮಾರ್ ಅವರ ಪ್ರಮಾಣ ವಚನ ಸ್ವೀಕಾರಕ್ಕೂ ಒಂದು ದಿನ ಮೊದಲೇ ಆರ್ಥಿಕ ಇಲಾಖೆಯು 155 ವಿವಿಧ ಸಂಸ್ಥೆಗಳಿಗೆ 71.85 ಕೋಟಿ ಅನುದಾನ ಮಂಜೂರು ಮಾಡಿದೆ. ಸಮುದಾಯ ಭವನ ಹಾಸ್ಟೆಲ್ ನಿರ್ಮಾಣಕ್ಕೆ ಮೀಸಲಿಟ್ಟ ಬಜೆಟ್‌ನ ಶೇ 52 ರಷ್ಟು ಅನುದಾನ ಇದೀಗ ಕೆಲವೇ ಸಮುದಾಯದ ಸಂಸ್ಥೆಗಳಿಗೆ ಮಂಜೂರಾಗಿದೆ. 2026-27 ಸಾಲಿನ ಬಜೆಟ್‌ನಲ್ಲಿ ಸಮುದಾಯ ಭವನಗಳ ನಿರ್ಮಾಣಕ್ಕೆ 136 ಕೋಟಿ ಮೀಸಲಿಟ್ಟಿದ್ದ ಸರ್ಕಾರ ಈ ಪೈಕಿ ಶೇ 52 ರಷ್ಟು ಅನುದಾನವನ್ನು ಕೇವಲ ಮೂರ್ನಾಲ್ಕು ಸಮುದಾಯಗಳಿಗೆ ಮಾತ್ರ ಮಂಜೂರು ಮಾಡಿದೆ. 8 ಮಡಿವಾಳ ಸಮುದಾಯ ಸಂಘಗಳು, 2 ಯಾದವ ಸಮುದಾಯ ಸಂಘಗಳು, 1 ಹೆಳವ ಸಮುದಾಯ ಸಂಘ, 1 ಸವಿತಾ ಸಮಾಜದ ಸಂಘ ಮತ್ತು ಟೀ ನರಸೀಪುರ ತಾಲ್ಲೂಕಿಗೆ 13 ಸಮುದಾಯ ಭವನಗಳನ್ನು ಮಂಜೂರು ಮಾಡಲಾಗಿದೆ. ಜೊತೆಗೆ ಕುರುಬ ಸಮುದಾಯದ 89 ಸಂಘ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ. ಇದರೊಂದಿಗೆ ಗದಗದ ರಾಕೇಶ್ ಸಿದ್ದರಾಮಯ್ಯ ಟ್ರಸ್ಟ್‌ಗೂ 50 ಲಕ್ಷ ಅನುದಾನ ಬಿಡುಗಡೆಯಾಗಿದೆ ಎನ್ನಲಾಗಿದೆ.

**ತರಾತುರಿಯಲ್ಲಿ ಅನುದಾನ ಮಂಜೂರು**

ಹಿಂದುಳಿದ ವರ್ಗಗಳ ಸಮುದಾಯದ ಅಡಿಯಲ್ಲಿ ಸಾವಿರಕ್ಕೂ ಹೆಚ್ಚು ಜಾತಿಗಳು ಬರುತ್ತವೆ. ಪ್ರವರ್ಗ 1ರಲ್ಲಿಯೇ 147 ಜಾತಿಗಳಿದ್ದು, ಇವೆಲ್ಲವನ್ನೂ ಕಡೆಗಣಿಸಿ ಕೇವಲ ಮೂರ್ನಾಲ್ಕು ಸಮುದಾಯಕ್ಕೆ ತರಾತುರಿಯಲ್ಲಿ ಅನುದಾನ ಮಂಜೂರು ಮಾಡಲಾಗಿದ್ದು, ಅನುಮಾನ ವ್ಯಕ್ತವಾಗಿದೆ. ಹಿಂದುಳಿದ ವರ್ಗಗಳ ಪೈಕಿ ಕುರುಬ ಸಮುದಾಯಕ್ಕೆ ಹೆಚ್ಚಿನ ಅನುದಾನ ನೀಡಿದ್ದು, ಅಧಿಕಾರದಿಂದ ಇಳಿಯುವ ವೇಳೆ ತರಾತುರಿಯಲ್ಲಿ ಸಿದ್ದರಾಮಯ್ಯ ಈ ಆದೇಶ ಹೊರಡಿಸಿದ್ದಾರೆ ಎಂದು ತಿಳಿದು ಬಂದಿದೆ.

## ಬೈಕ್ ಟ್ಯಾಕ್ಸಿ ಕ್ಯಾಪ್ಟನ್‌ಗೆ ಚಾಕು ತೋರಿಸಿ ಪ್ರಯಾಣಿಕನಿಂದ ದರೋಡೆ!

• ಉದಯವಾಹಿನಿ, ಬೆಂಗಳೂರು

ಪಶ್ಚಿಮ ಬಂಗಾಳದ 37 ವರ್ಷದ ಬೈಕ್ ಟ್ಯಾಕ್ಸಿ ಸವಾರನ ಮೇಲೆ ಹಲ್ಲೆ ನಡೆಸಿದ ಮೂವರು ದುಷ್ಕರ್ಮಿಗಳು ಹಣ ದೋಚಿರುವ ಘಟನೆ ಸರ್ಜಾಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಸಂತ್ರಸ್ತನನ್ನು ಎಂ.ಡಿ. ರುಕುನ್ ಉದ್ದೀನ್ ಎಂದು ಗುರುತಿಸಲಾಗಿದ್ದು, ಕಳೆದ ಏಳು ವರ್ಷಗಳಿಂದ ಕೆ.ಆರ್. ಪುರಂನ ಎ. ನಾರಾಯಣಪುರದಲ್ಲಿ ವಾಸಿಸುತ್ತಿದ್ದಾರೆ. ಬೆಳಗಿನ ಜಾವ ಈ ಘಟನೆ ನಡೆದಿದೆ. ಆನೇಕಲ್ ತಾಲ್ಲೂಕಿನ ಬಿ. ಹೊಸಹಳ್ಳಿ ಬಳಿ ದರೋಡೆ ನಡೆದಿದೆ.ಮಧ್ಯರಾತ್ರಿಯ ಸುಮಾರಿಗೆ, ರವಿ ಎಂದು ಗುರುತಿಸಲಾದ ಆರೋಪಿಗಳಲ್ಲಿ ಒಬ್ಬ ಎಲೆಕ್ಟ್ರಾನಿಕ್ ಸಿಟಿ ಮೆಟ್ರೋ ನಿಲ್ದಾಣದಿಂದ ಸಂತ್ರಸ್ತನ ಸ್ಕೂಟರ್ ಬುಕ್ ಮಾಡಿದ್ದ. ಡ್ರಾಪ್ ಪಾಯಿಂಟ್ ಬಿ. ಹೊಸಹಳ್ಳಿ ಎಂದಿತ್ತು. ಆದರೆ ಡ್ರಾಪ್ ಪಾಯಿಂಟ್‌ಗೆ ಇನ್ನೂ ಒಂದು ಕಿಲೋಮೀಟರ್ ದೂರದಲ್ಲಿ, ಯುಪಿಐ ಮೂಲಕ ಹಣವನ್ನು ವರ್ಗಾಯಿಸಲು ಸಾಧ್ಯವಾಗದ ಕಾರಣ ಆರೋಪಿ ಉದ್ದೀನ್‌ಗೆ ಸ್ಕೂಟರ್ ನಿಲ್ಲಿಸಲು ಹೇಳಿದನು. ಇಬ್ಬರು ಆರೋಪಿಗಳು ಬೈಕ್‌ನಲ್ಲಿ ಬಂದರು. ಬಲಿಪಶುವಿನ ಮೇಲೆ ದಾಳಿ ಮಾಡಿದ ಮೂವರು ಆರೋಪಿಗಳು ಆತನನ್ನು ಪೊದೆಯ ಬಳಿ ಎಳೆದೊಯ್ದಿದ್ದಾರೆ.

# ಐಶ್ವರ್ಯ ಮಾಲ್ ಕಟ್ಟಡ ನಿರ್ಮಾಣದಲ್ಲಿ ಅಕ್ರಮ;ರಮೇಶ್ ಆರೋಪ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಗಾಂಧಿನಗರ ವಿಧಾನಸಭಾ ಕ್ಷೇತ್ರದ ಕೆ.ಜಿ. ರಸ್ತೆಯಲ್ಲಿರುವ ಐಶ್ವರ್ಯ ಮಾಲ್ ಕಟ್ಟಡಕ್ಕೆ ಸಂಬಂಧಿಸಿದಂತೆ ಭಾರೀ ಅಕ್ರಮಗಳು ನಡೆದಿವೆ ಎಂದು ಆರೋಪಿಸಿರುವ ಬಿಜೆಪಿ ಮುಖಂಡ ಹಾಗೂ ಮಾಜಿ ಬಿಬಿಎಂಪಿ ಆಡಳಿತ ಪಕ್ಷದ ನಾಯಕ ರಮೇಶ್ ಎನ್.ಆರ್. ಸಂಬಂಧಿತ ಅಧಿಕಾರಿಗಳು ಮತ್ತು ನಿರ್ಮಾಣ ಸಂಸ್ಥೆಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ನಗರಾಭಿವೃದ್ಧಿ ಇಲಾಖೆ, ಜಿಬಿಎ ಮುಖ್ಯ ಆಯುಕ್ತರು ಹಾಗೂ ಬೆಂಗಳೂರು ಕೇಂದ್ರ ನಗರ ಪಾಲಿಕೆ ಆಯುಕ್ತರಿಗೆ ಸಲ್ಲಿಸಿರುವ ದೂರಿನಲ್ಲಿ, ಮಾಲ್ ನಿರ್ಮಾಣದಲ್ಲಿ ಅಕ್ರಮ, ಮಂಜೂರಾತಿ ಪಡೆದ ನಕ್ಷೆಗೆ ವಿರುದ್ಧವಾಗಿ ಕಟ್ಟಡ ನಿರ್ಮಾಣ, ಆಸ್ತಿ ತೆರಿಗೆ ವಂಚನೆ ಸೇರಿದಂತೆ ಹಲವು ಗಂಭೀರ ಆರೋಪಗಳನ್ನು ಮಾಡಿದ್ದಾರೆ.

ರಮೇಶ್ ಎನ್.ಆರ್. ಅವರ ಪ್ರಕಾರ, ಕೆ.ಜಿ. ರಸ್ತೆಯಲ್ಲಿರುವ ಮಾಜಿ ಗುಪ್ತಾ ಮಾರ್ಕೆಟ್ ಜಾಗವು ಮೂಲತಃ ಸರ್ಕಾರದ ಸ್ವತ್ತಾಗಿದ್ದು, 1953-54ರಲ್ಲಿ 99 ವರ್ಷಗಳ ಗುತ್ತಿಗೆ ಆಧಾರದ ಮೇಲೆ ನೀಡಲಾಗಿತ್ತು. ಬಳಿಕ ಈ ಸ್ವತ್ತನ್ನು ಕಾನೂನುಬಾಹಿರವಾಗಿ ಖರೀದಿಸಿ, ಐಶ್ವರ್ಯ ಹೇರಿಹೈಟ್ಸ್ ಇನ್ಫೋ ಪ್ರವೇಟ್ ಲಿಮಿಟೆಡ್ ಹೆಸರಿನಲ್ಲಿ ವಾಣಿಜ್ಯ ಸಂಕೀರ್ಣ ನಿರ್ಮಿಸಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ದೂರಿನ ಪ್ರಕಾರ, 5 ತಳಮಹಡಿ, ನೆಲ ಅಂತಸ್ತು ಹಾಗೂ 5 ಮೇಲಂತಸ್ತುಗಳೊಂದಿಗೆ ಒಟ್ಟು 11 ಅಂತಸ್ತಿನ ಕಟ್ಟಡಕ್ಕೆ ಮಾತ್ರ ಅನುಮತಿ ದೊರೆತಿದ್ದರೂ, ಪ್ರಸ್ತುತ 5 ತಳಮಹಡಿ, ನೆಲ ಅಂತಸ್ತು ಮತ್ತು 7 ಮೇಲಂತಸ್ತುಗಳೊಂದಿಗೆ 13 ಅಂತಸ್ತಿನ ಕಟ್ಟಡ ನಿರ್ಮಿಸಲಾಗಿದೆ ಎಂದು ಆರೋಪಿಸಲಾಗಿದೆ. ಮಂಜೂರಾತಿ ಪ್ರಕಾರ 3.28 ಲಕ್ಷ ಚದರ ಅಡಿ ನಿರ್ಮಾಣಕ್ಕೆ ಅವಕಾಶವಿದ್ದರೂ, ಸುಮಾರು 3.86 ಲಕ್ಷ ಚದರ ಅಡಿ ಕಟ್ಟಡ ನಿರ್ಮಿಸಲಾಗಿದ್ದು, 57,781 ಚದರ ಅಡಿ ಹೆಚ್ಚುವರಿ ನಿರ್ಮಾಣ ನಡೆದಿದೆ ಎಂದು ಅವರು ಹೇಳಿದ್ದಾರೆ. ಬಿದರಹಳ್ಳಿ, ರಾಂಪುರ ಹಾಗೂ ಬಿ.ಕೆ. ಹಳ್ಳಿ ಪ್ರದೇಶಗಳಿಂದ ಪಡೆದಗಳನ್ನು ಮೆಜೆಸ್ಟಿಕ್‌ನ '' ವಲಯದಲ್ಲಿ ಬಳಸಲಾಗಿದೆ. ' ವಲಯದಲ್ಲಿ ಬಳಸುವಾಗ ಶೇ.30 ರಷ್ಟು ಕಡಿತ ಅನ್ವಯಿಸಬೇಕಾಗಿದ್ದರೂ, ಅದನ್ನು ಪಾಲಿಸದೆ ಸುಮಾರು 352.72 ಶೇಕಡಾ ವ್ಯತಿರಿಕ್ತ ನಿರ್ಮಾಣ ನಡೆಸಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಅಲ್ಲದೆ, ಕಟ್ಟಡಕ್ಕೆ ನೀಡಲು ಮುಂದಾಗಿರುವ ಅಧಿಕಾರಿಗಳ ವಿರುದ್ಧ ಕರ್ನಾಟಕ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲು ಸಿದ್ಧತೆ ನಡೆಸಲಾಗಿದೆ ಎಂದು ಅವರು ತಿಳಿಸಿದರು.

**ಲೋಕಾಯುಕ್ತಕ್ಕೆ ದೂರು**

ನಗರ ಯೋಜನೆ ಹಾಗೂ ಕಂದಾಯ ವಿಭಾಗದ ಕೆಲ ಹಿರಿಯ ಅಧಿಕಾರಿಗಳ ವಿರುದ್ಧ ಭ್ರಷ್ಟಾಚಾರ, ಅಧಿಕಾರ ದುರುಪಯೋಗ, ವಂಚನೆ ಹಾಗೂ ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ತನಿಖೆ ನಡೆಸುವಂತೆ ಮತ್ತು ಲೋಕಾಯುಕ್ತಕ್ಕೆ ದಾಖಲೆಗಳೊಂದಿಗೆ ದೂರು ಸಲ್ಲಿಸಲಾಗಿದೆ ಎಂದು ರಮೇಶ್ ತಿಳಿಸಿದ್ದಾರೆ.

**ಸ್ವಾಧೀನ ಪತ್ರ ನೀಡಬಾರದು**

ಈ ಕುರಿತು 2018ರಿಂದಲೇ ಹಲವು ಬಾರಿ ದೂರುಗಳನ್ನು ಸಲ್ಲಿಸಿದ್ದರೂ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಆರೋಪಿಸಿರುವ ರಮೇಶ್ ಎನ್.ಆರ್., ಕಟ್ಟಡಕ್ಕೆ ಯಾವುದೇ ಕಾರಣಕ್ಕೂ ಸ್ವಾಧೀನ ಪತ್ರ ನೀಡಬಾರದು ಎಂದು ಆಗ್ರಹಿಸಿದ್ದಾರೆ.

**ಹಲವು ಅನುಮಾನಗಳಿಗೆ ಕಾರಣ**

ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಜಂಟಿ ಆಯುಕ್ತರು 2026ರ ಮಾರ್ಚ್ 7ರಂದು ಸುಮಾರು 27.91 ಕೋಟಿ ಮೊತ್ತದ ಡಿಮ್ಯಾಂಡ್ ನೋಟಿಸ್ ನೀಡಿ, ಹಣ ಪಾವತಿಸಿ ಪಡೆಯುವಂತೆ ಸೂಚಿಸಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಅವರು ದೂರಿದ್ದಾರೆ.-ರಮೇಶ್ ಎನ್.ಆರ್. ಮಾಜಿ ಬಿಬಿಎಂಪಿ ಆಡಳಿತ ಪಕ್ಷದ ನಾಯಕ

**ಪಾಲಿಕೆಗೆ ಭಾರೀ ನಷ್ಟ**

ಸುಮಾರು 3.86 ಲಕ್ಷ ಚದರ ಅಡಿ ನಿರ್ಮಾಣವಾಗಿದ್ದರೂ, ಕೇವಲ 6,500 ಚದರ ಅಡಿ ವಿಸ್ತೀರ್ಣದ ಕಟ್ಟಡವನ್ನು ಮಾತ್ರ ಸ್ವಯಂ ಘೋಷಿತ ಆಸ್ತಿ ತೆರಿಗೆ ಪದ್ಧತಿಯಲ್ಲಿ ದಾಖಲಿಸಿ ತೆರಿಗೆ ಪಾವತಿಸಲಾಗಿದೆ. ಇದರಿಂದ ಪಾಲಿಕೆಗೆ ಭಾರೀ ನಷ್ಟ ಉಂಟಾಗಿದೆ ಎಂದು ಆರೋಪಿಸಲಾಗಿದೆ.

**ಪ್ರತಿ ಚುನಾವಣೆಯಲ್ಲಿ ಎಚ್.ಡಿ.ಕುಮಾರಸ್ವಾಮಿ ಪ್ರಚಾರಕ್ಕೆ ಬರುತ್ತಾರೆ.ಈಗ 'ನಿಖಿಲ್ ಅಣ್ಣನನ್ನು ಕರ್ಕೊಂಡ್ ಬರ್ತೀವಿ!**

# ಹಿರಿಯೂರು ಉಪಚುನಾವಣೆಗೆ ಸ್ಪರ್ಧಾಕಾಂಕ್ಷಿಗಳ ಸಕಲ ಸಿದ್ಧತೆ

• **ಉದಯವಾಹಿನಿ, ಚಿತ್ರದುರ್ಗ**

ಡಿ.ಸುಧಾಕರ್ ಅವರ ನಿಧನದಿಂದ ಹಿರಿಯೂರು ವಿಧಾನಸಭಾ ಕ್ಷೇತ್ರಕ್ಕೆ ಉಪ ಚುನಾವಣೆ ನಡೆಯಲಿದ್ದು ಸ್ಪರ್ಧಾಕಾಂಕ್ಷಿಗಳು ಸಕಲ ಸಿದ್ದತೆ ಮಾಡಿಕೊಳ್ಳುತ್ತಿದ್ದಾರೆ.

ಆದರೆ, ಕ್ಷೇತ್ರದಲ್ಲಿ ಹೆಸರೇ ಇಲ್ಲದ, ಕ್ಷೇತ್ರಕ್ಕೆ ಸಂಬಂಧವೇ ಇಲ್ಲದ ಹಲವು ಉದ್ಯಮಿಗಳು, ಚಿನ್ನದ ವ್ಯಾಪಾರಿಗಳು, ನಿವೃತ್ತ ಅಧಿಕಾರಿಗಳು ಅಬ್ಬರ ಸೃಷ್ಟಿಸುತ್ತಿರುವುದು ಕುತೂಹಲ ಮೂಡಿಸಿದೆ.

ಹಾಲಿ ಸಚಿವರೊಬ್ಬರು ಮೃತರಾಗಿ ಉಪ ಚುನಾವಣೆ ಎದುರಾಗಿರುವುದು ಜಿಲ್ಲೆಯ ಇತಿಹಾಸದಲ್ಲಿ ಇದೇ ಮೊದಲು. ಹಿರಿಯೂರು ವಿಧಾನಸಭಾ ಕ್ಷೇತ್ರಕ್ಕೆ ಮೊದಲ ಉಪಚುನಾವಣೆ ಎದುರಾಗಲಿದೆ.

ಪ್ರಮುಖ ರಾಜಕೀಯ ಪಕ್ಷಗಳಾದ ಕಾಂಗ್ರೆಸ್, ಬಿಜೆಪಿ-ಜೆಡಿಎಸ್ ಮೈತ್ರಿಕೂಟವು ತನ್ನ ಅಭ್ಯರ್ಥಿಗಳನ್ನು ಅಧಿಕೃತವಾಗಿ ಘೋಷಿಸಬೇಕಿದೆ. ಉಪ ಚುನಾವಣೆ ದಿನಾಂಕ ಇನ್ನೂ ನಿಗದಿಯಾಗದ್ದರಿಂದ ಘೋಷಣೆಗೆ ಕಾಲಾವಕಾಶವಿದೆ.

ಅಲ್ಲದೆ, ಸಾರ್ವತ್ರಿಕ ಚುನಾವಣೆಗೆ ಕೇವಲ 2 ವರ್ಷ ಉಳಿದಿದ್ದರೂ ಉಪ ಸಮರದಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡುವವರ ಸಂಖ್ಯೆ ದಿನದಿಂದ ದಿನಕ್ಕೆ ಏರುತ್ತಲೇ ಸಾಗುತ್ತಿದೆ.

2023ರ ಚುನಾವಣೆ ವೇಳೆ ಕಾಣಿಸಿಕೊಂಡು ಮತದಾನ ಮುಗಿದ ನಂತರ ನಾಪತ್ತೆಯಾಗಿದ್ದ ಕೆಲ ಉದ್ಯಮಿಗಳು, ವರ್ತಕರು ಮತ್ತೆ ಹಿರಿಯೂರು ಕ್ಷೇತ್ರದತ್ತ ಕಾಲಿಡುತ್ತಿದ್ದಾರೆ. ಜೊತೆಯಲ್ಲಿ ತಮ್ಮ ಬೆಂಬಲಿಗರನ್ನು ಕರೆದುಕೊಂಡು ಟೆಂಪಲ್ ರನ್ (ದೇವರ ದರ್ಶನ) ಮಾಡುತ್ತಿದ್ದಾರೆ.

ಮಠಗಳಿಗೆ ಭೇಟಿಯಾಗಿ ಸ್ವಾಮೀಜಿಗಳ ಆಶೀರ್ವಾದ ಪಡೆಯುತ್ತಿದ್ದಾರೆ. ವಿವಾಹ ಸಮಾರಂಭಕ್ಕೂ ತೆರಳಿ ವಧು-ವರರಿಗೆ ಶುಭ ಹಾರೈಸುತ್ತಿದ್ದಾರೆ. ಮೃತಪಟ್ಟವರ ಮನೆಗೆ ತೆರಳಿ ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳುತ್ತಿದ್ದಾರೆ.

**ಅನುಕಂಪದ ಅಲೆಯಲ್ಲಿ ಕಾಂಗ್ರೆಸ್**

ಈ ಕುರಿತ ಚಿತ್ರ, ವಿಡಿಯೊಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಉಪ ಚುನಾವಣೆಯಲ್ಲಿ ತಾವೇ ಅಭ್ಯರ್ಥಿ ಎಂದು ಬಿಂಬಿಸಿಕೊಳ್ಳುತ್ತಿದ್ದಾರೆ.

ಹಿರಿಯೂರು ಕ್ಷೇತ್ರದ ಹಿನ್ನೆಲೆ ಬಗ್ಗೆ, ತಮಗೂ ಕ್ಷೇತ್ರಕ್ಕೂ ಇರುವ ಸಂಬಂಧಗಳ ಬಗ್ಗೆ, ಕ್ಷೇತ್ರದ ಜನರಿಗೆ ಮಾಡಿರುವ ಸಹಾಯದ ಬಗ್ಗೆ ಮಾತನಾಡುತ್ತಿದ್ದಾರೆ. ತಮಗೂ ಒಂದು ಅವಕಾಶ ಕೊಡಬೇಕು ಎಂದು ಕೈಮುಗಿಯುತ್ತಿದ್ದಾರೆ. ಇದನ್ನೆಲ್ಲಾ ನೋಡುತ್ತಿರುವ ಜನರು ಗೊಂದಲಕ್ಕೀಡಾಗಿದ್ದು, ಇರುವ 2 ವರ್ಷದ ಅವಧಿಗೆ ಇಷ್ಟೊಂದು ಆಕಾಂಕ್ಷಿಗಳಾ? ಎಂದು ಅಚ್ಚರಿ ವ್ಯಕ್ತಪಡಿಸುತ್ತಿದ್ದಾರೆ.

'ಕಳೆದ ಹಲವು ಚುನಾವಣೆಗಳಲ್ಲೂ ಹಿರಿಯೂರಿನ ಸಂಬಂಧ ಹೇಳಿಕೊಂಡು ಹಲವರು ಪಕ್ಷೇತರರಾಗಿ ಸ್ಪರ್ಧಿಸಿದ್ದರು. ಅವರಲ್ಲಿ ಬಹುತೇಕ ಮಂದಿ ನಾಮಪತ್ರ ವಾಪಸ್ ಪಡೆದು ಕಾಲ್ಕಿತ್ತರು. ವ್ಯಾಪಾರಿಯೊಬ್ಬ ಕಾಂಗ್ರೆಸ್ ಮುಖಂಡರಿಗೆ ಬ್ಲಾಕ್‌ಮೇಲ್ ಮಾಡಿ ತನ್ನ ವಿರುದ್ಧ ಇದ್ದ ವಂಚನೆ ಪ್ರಕರಣಗಳನ್ನು ರದ್ದು ಮಾಡಿಸಿಕೊಂಡು ಕಣ್ಮರೆಯಾದ. ಈಗಲೂ ಬ್ಲ್ಯಾಕ್‌ಮೇಲ್ ಗಿರಾಕಿಗಳೇ ಕ್ಷೇತ್ರದಲ್ಲಿ ಅಡ್ಡಾಡುತ್ತಿದ್ದಾರೆ' ಎಂದು ಹಿರಿಯೂರಿನ ರೈತ ಮುಖಂಡರೊಬ್ಬರು ತಿಳಿಸಿದರು.

'ಸುಧಾಕರ್ ಅವರಿಗಿದ್ದ ವೈಯಕ್ತಿಕ ವರ್ಚಸ್ಸು ಸುಹಾಸ್‌ಗೆ ಇದೆಯಾ, ಕ್ಷೇತ್ರದಲ್ಲಿ ಅನುಕಂಪ ನಡೆಯುತ್ತದೆಯಾ?' ಎಂಬ ಪ್ರಶ್ನೆಯೂ ಕ್ಷೇತ್ರದ ಜನರಲ್ಲಿದೆ. ಹೀಗಾಗಿ ಕ್ಷೇತ್ರದಲ್ಲಿ ಬಹುಸಂಖ್ಯಾತರಾಗಿರುವ ಯಾದವ ಅಥವಾ ಒಕ್ಕಲಿಗ (ಕುಂಚಿಟಿಗ) ಸಮುದಾಯಕ್ಕೆ ಸೇರಿದ ಅಭ್ಯರ್ಥಿಗಳನ್ನು ಕಣಕ್ಕಿಳಿಸಬೇಕು ಎಂಬ ಒತ್ತಾಯವೂ ಕೇಳಿಬರುತ್ತಿದೆ.

ಮಾಜಿ ಶಾಸಕಿ ಪೂರ್ಣಿಮಾ ಶ್ರೀನಿವಾಸ್, ಗನ್ನಾಯಕನಹಳ್ಳಿ ಮೂಲದ ಆರ್.ಮಂಜುನಾಥ್, ತಾಲ್ಲೂಕು ಘಟಕದ ಮಾಜಿ ಅಧ್ಯಕ್ಷ ಬಿ.ಎಚ್.ಮಂಜುನಾಥ್ ಮತ್ತಿತರರು ಟಿಕೆಟ್ ಆಕಾಂಕ್ಷಿಯಾಗಿದ್ದಾರೆ. ಸುಧಾಕರ್ ಕುಟುಂಬ ಸದಸ್ಯರಿಗೆ ಟಿಕೆಟ್ ನೀಡದಿದ್ದರೆ ತಮಗೇ ಟಿಕೆಟ್ ಕೊಡಬೇಕು ಎಂದು ಒತ್ತಾಯಿಸುತ್ತಿದ್ದಾರೆ.

ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿ ಯಾರಾಗುತ್ತಾರೆ ಎಂಬುದೂ ಕುತೂಹಲ ಮೂಡಿಸಿದೆ. ಹಿರಿಯೂರು ಕ್ಷೇತ್ರದ ಐಮಂಗಲ ಹೋಬಳಿ ವ್ಯಾಪ್ತಿಯಲ್ಲಿ ಪ್ರಭಾವ ಹೊಂದಿರುವ ಮಾಜಿ ಶಾಸಕ ಜಿ.ಎಚ್. ತಿಪ್ಪಾರೆಡ್ಡಿ ಅಥವಾ ಅವರ ಪುತ್ರ, ಬಿಜೆಪಿ ಜಿಲ್ಲಾ ಘಟಕದ ಉಪಾಧ್ಯಕ್ಷ ಡಾ.ಸಿದ್ದಾರ್ಥ ಗುಂಡಾರ್ಪಿ ಅಭ್ಯರ್ಥಿಯಾಗುತ್ತಾರೆ ಎಂಬ ಮಾತುಗಳೂ ಕೇಳಿಬರುತ್ತಿವೆ. ಕಾಡುಗೊಲ್ಲ ಸಂಘದ ರಾಜ್ಯ ಘಟಕದ ಅಧ್ಯಕ್ಷ ಈಚೆಗೆ ಬಿಜೆಪಿ ಸೇರ್ಪಡೆಯಾಗಿರುವುದು ಕುತೂಹಲ ಮೂಡಿಸಿದೆ. ಅವರೇ ಮೈತ್ರಿ ಅಭ್ಯರ್ಥಿಯಾಗುತ್ತಾರೆ ಎಂಬ ಸುದ್ದಿಗಳೂ ಹರಿದಾಡುತ್ತಿವೆ.

**ನಿಖಿಲ್ ಅಣ್ಣನನ್ನು ಕರ್ಕೊಂಡ್ ಬರ್ತೀವಿ!** ಕ್ಷೇತ್ರದಲ್ಲಿ 45,000ಕ್ಕೂ ಹೆಚ್ಚು ಒಕ್ಕಲಿಗರ ಮತಗಳಿರುವ ಕಾರಣ ಸಹಜವಾಗಿ ಕ್ಷೇತ್ರದ ಮೇಲೆ ಜೆಡಿಎಸ್‌ಗೆ ಹಿಡಿತವಿದೆ. ಪ್ರತಿ ಚುನಾವಣೆಯಲ್ಲಿ ಎಚ್.ಡಿ. ಕುಮಾರಸ್ವಾಮಿ ಪ್ರಚಾರಕ್ಕೆ ಬರುತ್ತಾರೆ. ಕಳೆದ ಚುನಾವಣೆ ವೇಳೆ ಕುಮಾರಸ್ವಾಮಿ ಅವರ ಪತ್ನಿ ಅನಿತಾ ಕುಮಾರಸ್ವಾಮಿ ಅಭ್ಯರ್ಥಿಯಾಗುತ್ತಾರೆ ಎಂಬ ಸುದ್ದಿಯೂ ಇತ್ತು. ಹೀಗಾಗಿ ಉಳಿದ 2 ವರ್ಷಗಳ ಅವಧಿಗಾಗಿ ನಿಖಿಲ್ ಕುಮಾರಸ್ವಾಮಿ ಅಭ್ಯರ್ಥಿಯಾಗುತ್ತಾರೆ ಎಂಬ ಮಾತುಗಳೂ ಕ್ಷೇತ್ರದಲ್ಲಿವೆ.





> ಶಾಸಕರು ಮೃತಪಟ್ಟಾಗ ಅವರ ಕುಟುಂಬ ಸದಸ್ಯರಿಗೆ ಟಿಕೆಟ್ ನೀಡುವುದು ಕಾಂಗ್ರೆಸ್ ಸಂಪ್ರದಾಯ. ಸುಹಾಸ್ ಕಳೆದ ಹಲವು ಚುನಾವಣೆಗಳಲ್ಲೂ ತಂದೆಯ ಜೊತೆ ಕೆಲಸ ಮಾಡಿದ್ದಾರೆ. ದಾವಣಗೆರೆ, ಬಾಗಲಕೋಟೆಯಂತೆ ಹಿರಿಯೂರಿನಲ್ಲೂ ಕಾಂಗ್ರೆಸ್ ಗೆಲ್ಲುತ್ತದೆ.
> -ಎಂ.ಕೆ.ತಾಜ್‌ಪೀರ್, ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ

> 'ಉಪ ಚುನಾವಣೆಗೆ ನಿಖಿಲ್ ಅಣ್ಣನನ್ನು ಕರ್ಕೊಂಡ್ ಬರ್ತೀವಿ, 3 ಬಾರಿ ಸೋತಿರುವ ಅಣ್ಣನಿಗೆ ಹಿರಿಯೂರಿನಿಂದ ವಿಜಯ ಮಾಲೆ ಹಾಕ್ತಿವಿ'
> - ನಿಖಿಲ್ ಅವರ ಅಭಿಮಾನಿಗಳು

**ಅನುಕಂಪದ ಅಲೆಯಲ್ಲಿ ಕಾಂಗ್ರೆಸ್ ಕ್ಷೇತ್ರ**

ಪಕ್ಷದ ವಲಯದಲ್ಲೂ ಚುನಾವಣಾ ಚಟುವಟಿಕೆಗಳು ನಡೆಯುತ್ತಿವೆ. ಡಿ.ಸುಧಾಕರ್ ಅವರ ಪುತ್ರ ಸುಹಾಸ್ ಸುಧಾಕರ್ ಅವರಿಗೆ ಕಾಂಗ್ರೆಸ್ ಟಿಕೆಟ್ ನೀಡಲಿದೆ, ಅನುಕಂಪದ ಅಲೆಯಲ್ಲಿ ಕಾಂಗ್ರೆಸ್ ಕ್ಷೇತ್ರ ಉಳಿಸಿಕೊಳ್ಳಲಿದೆ ಎಂಬ ಮಾತುಗಳು ವ್ಯಾಪಕವಾಗಿವೆ. ಜೈನ ಸಮುದಾಯಕ್ಕೆ ಸೇರಿದ್ದ ಸುಧಾಕರ್ ಅವರು ಧರ್ಮ, ಜಾತಿ ಮೀರಿ ಕ್ಷೇತ್ರದಲ್ಲಿ 3 ಬಾರಿ ಗೆಲುವು ಸಾಧಿಸಿದ್ದರು. ಕ್ಷೇತ್ರದಲ್ಲಿ ಜೈನ ಸಮುದಾಯದ ಮತಗಳ ಸಂಖ್ಯೆ 50 ದಾಟದಿದ್ದರೂ ಎಲ್ಲಾ ಸಮುದಾಯಗಳ ಜೊತೆಗಿದ್ದ ಸ್ನೇಹ, ಪ್ರೀತಿಯಿಂದಲೇ ಗೆಲುವು ಸಾಧಿಸುತ್ತಿದ್ದರು.

## ರೌಡಿ ಸ್ಕ್ವಾಡನಿಂದ ಜನರ ಪರಿಶೀಲನೆ

• **ಉದಯವಾಹಿನಿ, ಧಾರವಾಡ,**

ಧಾರವಾಡ ಜಿಲ್ಲಾ ವ್ಯಾಪ್ತಿಯ ವಿವಿಧ ಪೊಲೀಸ್ ಠಾಣೆಗಳ ಪಟ್ಟಣ ಹಾಗೂ ಗ್ರಾಮಗಳಲ್ಲಿ ಬೆಳಿಗ್ಗೆ ರೌಡಿ ಸ್ಕ್ವಾಡದಿಂದ ರೌಡಿ ಜನರ ಮನೆಗಳಿಗೆ ಹೋಗಿ ಮುಂಜಾಗ್ರತಾ ಕ್ರಮವಾಗಿ ಪರಿಶೀಲನೆ ಮಾಡಿದ್ದು, ಪೊಲೀಸ್ ಅಧೀಕ್ಷಕರ ಅವರ ಮಾರ್ಗದರ್ಶನದಂತೆ ಧಾರವಾಡ ಗ್ರಾಮೀಣದ ಡಿ.ಎಸ್.ಪಿ., ಸಿ.ಪಿ.ಐ, ಪಿ.ಐ ಹಾಗೂ ಪಿ.ಎಸ್.ಐ ಅವರು ಹಾಗೂ ಸಿಬ್ಬಂದಿಗಳು ಮುಂಜಾಗ್ರತಾ ಕ್ರಮವಾಗಿ ಪರಿಶೀಲನೆ ಕೈಕೊಂಡರು.

ಈ ಸಂದರ್ಭದಲ್ಲಿ ರೌಡಿ ಶೀಟರುಗಳ ಮನೆಗಳಲ್ಲಿ ಮಾರಕಾಸ್ತ್ರಗಳನ್ನು ಪರಿಶೀಲಿಸಿದ್ದು, ಹಾಗೂ ಧಾರವಾಡ ಗ್ರಾಮೀಣ ಪೊಲೀಸ್ ಠಾಣೆಯ ಹೊಲ್ತಿಕೋಟಿ ಗ್ರಾಮದ ಒಬ್ಬ ರೌಡಿ ಶೀಟರನ ಮನೆಯಲ್ಲಿ ಒಂದು ಸಾಗವಾನಿ ಮರದ ಬಡ್ಡಿ ಹಾಗೂ ಸೀಸಂ ಕಟ್ಟಿಗೆಯ ತುಂಡುಗಳು ಕಂಡು ಬಂದಿದ್ದು, ಈ ಕುರಿತು ಯಾವುದೇ ದಾಖಲಾತಿ ಇರದೇ ಇರುವುದರಿಂದ ಸದರಿ ಮಾಹಿತಿಯನ್ನು ಅರಣ್ಯಾಧಿಕಾರಿಗಳಿಗೆ ತಿಳಿಸಿದ್ದು, ಸ್ಥಳಕ್ಕೆ ಅರಣ್ಯಾಧಿಕಾರಿಗಳು ಬಂದು ಪರಿಶೀಲನೆ ಕೈಕೊಂಡಿದ್ದು ಇರುತ್ತದೆ. ಧಾರವಾಡ ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು 47 ಜನ ರೌಡಿ ಶೀಟರುಗಳ ಮನೆಗಳನ್ನು ಪರಿಶೀಲನೆ ಮಾಡಿ, ಸದರಿ ರೌಡಿಶೀಟರಗಳಿಗೆ ಸೂಕ್ತ ಕಾನೂನು ತಿಳುವಳಿಕೆ ಹಾಗೂ ಎಚ್ಚರಿಕೆ ನೀಡಲಾಯಿತು.

## ಅಭಿವೃದ್ಧಿ ಯೋಜನೆಗಳ ಕುರಿತು ಜಾಗೃತಿ ಮೂಡಿಸುವುದು ಪತ್ರಕರ್ತರ ಕರ್ತವ್ಯ

• **ಉದಯವಾಹಿನಿ, ವಿಜಯಪುರ:**

ಮಕ್ಕಳ ಆರೋಗ್ಯ, ಶಿಕ್ಷಣ, ಸುರಕ್ಷತೆ ಮತ್ತಿತರ ಅಭಿವೃದ್ಧಿ ಯೋಜನೆಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸುವುದು ಪತ್ರಕರ್ತರ ಆದ್ಯ ಕರ್ತವ್ಯವಾಗಿದೆ. ಆದ್ದರಿಂದ ಪತ್ರಕರ್ತರು ಮಕ್ಕಳು ಹಾಗೂ ಸಮಾಜದ ಹಿತದೃಷ್ಟಿಯಿಂದ ಅಭಿವೃದ್ಧಿ ಯೋಜನೆಗಳಿಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವಿಜಯಪುರ ಜಿಲ್ಲಾಧ್ಯಕ್ಷ ಅಶೋಕ ಯಡಳ್ಳಿ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ಹಾಗೂ ಮೈಸೂರು ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗವು ಹೈದರಾಬಾದ್‌ನ ಯುನಿಸೆಫ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಮಕ್ಕಳ ವಿಷಯಗಳ ಕುರಿತು ಕರ್ನಾಟಕ ರಾಜ್ಯದ ಪತ್ರಕರ್ತರಿಗೆ ಪರಿಚಯ ವಿಷಯದಡಿ ಕಿಶೋಧರ ಆರೋಗ್ಯ ಮತ್ತು ಪೌಷ್ಟಿಕತೆ, ಸಾಂಕ್ರಾಮಿಕವಲ್ಲದ ರೋಗಗಳು, ಆರೋಗ್ಯಕರ ಆಹಾರ ಪದ್ಧತಿ ಹಾಗೂ ರಸ್ತೆ ಸುರಕ್ಷತೆ ಕುರಿತ ಎರಡನೇ ದಿನದ ಕಾರ್ಯಾಗಾರದಲ್ಲಿ ಮಾತನಾಡಿದರು.

ಪತ್ರಕರ್ತರು ಸಾಕಷ್ಟು ಒತ್ತಡದಲ್ಲಿ ಕೆಲಸ ಮಾಡುತ್ತಿರುತ್ತೇವೆ. ಯುನಿಸೆಫ್ ಮಕ್ಕಳಿಗಾಗಿ ಜಗತ್ತಿನಾದ್ಯಂತ ಸಕ್ರಿಯ ಕೆಲಸ ಮಾಡುತ್ತಿದೆ. ಮಕ್ಕಳ ಆರೋಗ್ಯ, ಶಿಕ್ಷಣ, ಸುರಕ್ಷತೆ ಇನ್ನಿತರ ವಿಷಯಗಳ ಬಗ್ಗೆ ಜಾಗೃತಿ ಮೂಡಿಸುತ್ತಿದೆ. ಒಬ್ಬ ಪತ್ರಕರ್ತನಿಗೆ ಈ ಕಾರ್ಯಾಗಾರ ನೀಡುವುದರಿಂದ ಒಂದು ಲಕ್ಷ ಜನರಿಗೆ ಮಾಹಿತಿ ತಲುಪಿಸಿದಂತೆ ಆಗಲಿದೆ. ಒತ್ತಡದ ನಡುವೆಯೂ ನೀವೆಲ್ಲ ಕಾರ್ಯಾಗಾರಕ್ಕೆ ಬಂದಿದ್ದು ಖುಷಿ ತಂದಿದೆ. ಮಾಧ್ಯಮ ಬದಲಾಗಿದೆ. ಆದರೂ ಬದಲಾವಣೆ ಮಾಧ್ಯಮದಿಂದಲೇ ಸಾಧ್ಯ. ಇಂದು ರೀಲ್ಸ್ ಯುಗ ಬಂದಿದೆ. ಜನರಿಗೆ ಕೇಳಿಸಿಕೊಳ್ಳುವ ವ್ಯವಧಾನ ಇಲ್ಲ. ತಪ್ಪು ಮಾಹಿತಿ ನೀಡಿದರೂ ನಾವು ಸರಿಯಾದ ವಿಷಯ ಬರೆಯಬೇಕು ಎಂದು ಕಿವಿಮಾತು ಹೇಳಿದರು.

ಎರಡು ದಿನದ ಕಾರ್ಯಾಗಾರ ಬಗ್ಗೆ ಪತ್ರಕರ್ತರು ಅನುಭವ ಹಂಚಿಕೊಂಡರು. ಯುನಿಸೆಫ್ ಪ್ರತಿನಿಧಿ ಪ್ರಶೂನ್ ಸೇನ್, ಮೈಸೂರು ವಿವಿಯ ಸ್ವಪ್ನ ಎಂ.ಎಸ್., ಡಾ.ರಾಕೇಶ್, ಮಂಜುನಾಥ ಇತರರಿದ್ದರು.



ಉದಯವಾಹಿನಿ ಚಿತ್ರ

> ವಿಜಯಪುರ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ಹಾಗೂ ಮೈಸೂರು ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗವು ಹೈದರಾಬಾದ್‌ನ ಯುನಿಸೆಫ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಮಕ್ಕಳ ವಿಷಯಗಳ ಕುರಿತು ಕರ್ನಾಟಕ ರಾಜ್ಯದ ಪತ್ರಕರ್ತರಿಗೆ ಪರಿಚಯ ವಿಷಯದಡಿ ಕಿಶೋಧರ ಆರೋಗ್ಯ ಮತ್ತು ಪೌಷ್ಟಿಕತೆ, ಸಾಂಕ್ರಾಮಿಕವಲ್ಲದ ರೋಗಗಳು, ಆರೋಗ್ಯಕರ ಆಹಾರ ಪದ್ಧತಿ ಹಾಗೂ ರಸ್ತೆ ಸುರಕ್ಷತೆ ಕುರಿತ ಎರಡನೇ ದಿನದ ಕಾರ್ಯಾಗಾರದಲ್ಲಿ ಮಾತನಾಡಿದರು.
> ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವಿಜಯಪುರ ಜಿಲ್ಲಾಧ್ಯಕ್ಷ ಅಶೋಕ ಯಡಳ್ಳಿ

## ರೌಡಿಶೀಟರ್‌ಗಳ ಮನೆ ಪರಿಶೀಲನೆ ನಡೆಸಿದ ಪೊಲೀಸರು


ಉದಯವಾಹಿನಿ ಚಿತ್ರ

> ರೌಡಿಶೀಟ್‌ದಾರರ ಮನೆಗಳಿಗೆ ಭೇಟಿ ನೀಡಿ ಪರಿಶೀಲನೆ ಕೈಕೊಂಡಿದ್ದು, ಪರಿಶೀಲನೆ ಕಾಲಕ್ಕೆ ಕಂಡು ಬಂದ ಅನಧಿಕೃತ ವಸ್ತು, ದಾಖಲೆ ಇಲ್ಲದ ವಾಹನಗಳ ಬಗ್ಗೆ ನಿಯಮಾನುಸಾರವಾಗಿ ಮುಂದಿನ ಕಾನೂನು ಪ್ರಕ್ರಿಯೆ ಕೈಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.
> ಎಸ್ಪಿ ನಿಂಬರಗಿ

• **ಉದಯವಾಹಿನಿ, ವಿಜಯಪುರ**

ಪೊಲೀಸ ಇಲಾಖೆಯು ದಿನನಿತ್ಯದ ಕಾನೂನು ಸುವ್ಯವಸ್ಥೆ ಕಾಪಾಡಲು, ನಾಗರಿಕರ ಹಕ್ಕುಗಳನ್ನು ರಕ್ಷಿಸಲು ಮತ್ತು ಶಾಂತಿಯುತ ವಾತಾವರಣ ನಿರ್ಮಿಸುವ ಉದ್ದೇಶದಿಂದ ಠಾಣೆಗಳ ವ್ಯಾಪ್ತಿಯಲ್ಲಿ ಕಂಡು ಬರುವ ರೌಡಿ ಚಟುವಟಿಕೆಗಳ ಮೇಲೆ ನಿರಂತರ ನಿಗಾ ವಹಿಸಿ, ಕ್ರಮಗಳನ್ನು ಕೈಕೊಳ್ಳಲಾಗುತ್ತಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ತಿಳಿಸಿದ್ದಾರೆ.

ಸರ್ಕಾರವು ರೌಡಿ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಕ್ರಮದ ಭಾಗವಾಗಿ ಠಾಣೆ/ ವೃತ್ತ ಮಟ್ಟದಲ್ಲಿ 'ರೌಡಿ ನಿಗ್ರಹ ದಳ' ರಚಿಸಿ, ಕ್ರಮ ವಹಿಸಲು ಸೂಚಿಸಿದ್ದು, ಅದರಂತೆ ಜಿಲ್ಲೆಯ ಎಲ್ಲ ಠಾಣೆ/ವೃತ್ತ ಮಟ್ಟದಲ್ಲಿ 'ರೌಡಿ ನಿಗ್ರಹ ದಳ' ರಚಿಸಿ, ಕ್ರಮ ವಹಿಸಲಾಗಿರುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಕ್ರಮದ ಭಾಗವಾಗಿ ಜಿಲ್ಲೆಯಾದ್ಯಂತ ಚಟುವಟಿಕೆವುಳ್ಳ ರೌಡಿಶೀಟ್‌ದಾರರ ಮನೆಗಳಿಗೆ ವಿಶೇಷ ಪರಿಶೀಲನಾ ಭೇಟಿಯನ್ನು ಜಿಲ್ಲೆಯ ಒಟ್ಟು 24 ಕಾನೂನು ಸುವ್ಯವಸ್ಥೆಯ ಪೊಲೀಸ್ ಠಾಣೆಯಲ್ಲಿ ಕೈಕೊಳ್ಳಲಾಗಿರುತ್ತದೆ.

ಪರಿಶೀಲನೆಯ ಕಾಲಕ್ಕೆ ರೌಡಿದಾರರ ಪ್ರಸ್ತುತ ಚಟುವಟಿಕೆಗಳು ಪರಿಶೀಲನೆ ಕೈಕೊಂಡಿದ್ದು, ವಿವರ ಕೆಳಗಿನಂತಿದೆ ಎಂದು ಹೇಳಿದ್ದಾರೆ. ಒಟ್ಟು ಪರಿಶೀಲನೆ ಕೈಕೊಂಡ ರೌಡಿದಾರರ ಸಂಖ್ಯೆ 161 ಆಗಿದ್ದು, ಮಾರಾಕಾಸ್ತ್ರ ಕಂಡು ಬಂದ ಒಟ್ಟು ರೌಡಿದಾರರ ಸಂಖ್ಯೆ 3 ವಿವರಣೆ ನೀಡಲಾಗದಂತಹ ಹಾಗೂ ಅಗತ್ಯ ದಾಖಲಾತಿಗಳು ಇಲ್ಲದೇ ಬಳಸುತ್ತಿರುವ ದ್ವಿಚಕ್ರ ಹಾಗೂ ನಾಲ್ಕು ಚಕ್ರ ವಾಹನಗಳು ಕಂಡು ಬಂದ ರೌಡಿಶೀಟ್‌ದಾರರ ಸಂಖ್ಯೆ 11 ಇದೆ ಎಂದು ತಿಳಿಸಿದ್ದಾರೆ.

ಬಾಕಿ ಇರುವ ರೌಡಿದಾರರ ಸಂಖ್ಯೆ 6, ಉಲ್ಲಂಘಿಸಿದ ರೌಡಿದಾರರ ಸಂಖ್ಯೆ 1, ರೌಡಿಶೀಟ್‌ದಾರರ ಆಸ್ತಿ ಮುಟ್ಟುಗೋಲು/ ವಶಪಡಿಸಿಕೊಳ್ಳುವಿಕೆ 1, ರೌಡಿಶೀಟ್‌ದಾರರು ಪ್ರಸ್ತುತ ಉದ್ಯೋಗ/ ಕೆಲಸಗಳಲ್ಲಿ ತೊಡಗಿರುವವರ ವಿವರ 143 ಎಂದು ಗೊತ್ತಾಗಿದೆ ಎಂದು ಅವರು ವಿವರಿಸಿದ್ದಾರೆ.

## ಆಯುಷ್ಮಾನ್ ಭಾರತ್ ಫಲಾನುಭವಿಗಳಿಂದ ಹಣ ವಸೂಲಿ ಮಾಡಿದರೆ ಕಠಿಣ ಕ್ರಮ: ಸಚಿವ ಯು.ಟಿ. ಖಾದರ್ ಎಚ್ಚರಿಕೆ

• **ಉದಯವಾಹಿನಿ, ಮಂಗಳೂರು:**

ಖಾಸಗಿ ಆಸ್ಪತ್ರೆಗಳು ಆಯುಷ್ಮಾನ್ ಭಾರತ್ ಯೋಜನೆಯ ಫಲಾನುಭವಿಗಳಿಗೆ ಸಂಪೂರ್ಣ ನಗದುರಹಿತ ಚಿಕಿತ್ಸೆ ನೀಡದೆ ಹಣ ಪಾವತಿಸುವಂತೆ ಒತ್ತಾಯಿಸುತ್ತಿರುವ ಬಗ್ಗೆ ಬಂದಿರುವ ದೂರುಗಳ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು ಟಿ ಖಾದರ್ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಅರ್ಹ ರೋಗಿಗಳಿಂದ ಖಾಸಗಿ ಆಸ್ಪತ್ರೆಗಳು ಹಣ ಪಾವತಿಸುವಂತೆ ಒತ್ತಾಯಿಸಿದರೆ, ಸಂಬಂಧಿತ ಆರೋಗ್ಯ ಮಿತ್ರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು. ಆಯುಷ್ಮಾನ್ ಭಾರತ್ ಯೋಜನೆಯಡಿ ವಿಶೇಷ ವಾರ್ಡ್‌ಗಳನ್ನು ಆಯ್ಕೆ ಮಾಡುವ ರೋಗಿಗಳಿಗೂ ಸೌಲಭ್ಯವನ್ನು ವಿಸ್ತರಿಸುವ ಕುರಿತು ಸರ್ಕಾರ ಚಿಂತನೆ ನಡೆಸುತ್ತಿದೆ. ಈ ವ್ಯವಸ್ಥೆಯಲ್ಲಿ ರೋಗಿಗಳು ವಿಶೇಷ ವಾರ್ಡ್‌ಗೆ ಸಂಬಂಧಿಸಿದ ಹೆಚ್ಚುವರಿ ಶುಲ್ಕವನ್ನು ಮಾತ್ರ ಪಾವತಿಸಬೇಕಾಗುತ್ತದೆ ಎಂದು ಖಾದರ್ ಹೇಳಿದರು. ವಿಮಾ ಕ್ಲೈಮ್‌ಗಳ ಅನುಮೋದನೆಯಲ್ಲಿ ಅನಗತ್ಯ ವಿಳಂಬ ಮಾಡದಂತೆ ವೈದ್ಯರು ಹಾಗೂ ಆಸ್ಪತ್ರೆಗಳ ಆಡಳಿತ ಮಂಡಳಿಗಳಿಗೆ ಎಚ್ಚರಿಕೆ ನೀಡಿದರು. ಇಂತಹ ವಿಳಂಬವನ್ನು ಸರ್ಕಾರ ಸಹಿಸುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು. ಇದಕ್ಕೂ ಮೊದಲು, ಹಿರಿಯ ಆರೋಗ್ಯ ಅಧಿಕಾರಿಗಳು ಹಾಗೂ



ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯರು ಸಮಯಪಾಲನೆ ಮಾಡಬೇಕು ಹಾಗೂ ರೋಗಿಗಳನ್ನು ಮಾನವೀಯತೆ ಮತ್ತು ಸೌಜನ್ಯದಿಂದ ನೋಡಿಕೊಳ್ಳಬೇಕು ಎಂದು ಸಚಿವರು ಸೂಚಿಸಿದರು.

ಜಿಲ್ಲಾ ಆರೋಗ್ಯಾಧಿಕಾರಿ ಕಚೇರಿಯಿಂದಲೇ ಸಿಸಿಟಿವಿ ಸಂಪರ್ಕದ ಮೂಲಕ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಾರ್ಯವೈಖರಿಯನ್ನು ಮೇಲ್ವಿಚಾರಣೆ ಮಾಡುವ ಕೇಂದ್ರೀಕೃತ ವ್ಯವಸ್ಥೆ ರೂಪಿಸುವ ಸಾಧ್ಯತೆಯನ್ನು ಪರಿಶೀಲಿಸುವಂತೆ ಅವರು ಜಿಲ್ಲಾ ಆರೋಗ್ಯಾಧಿಕಾರಿಗೆ ನಿರ್ದೇಶನ ನೀಡಿದರು.

> ಗ್ರಾಮೀಣ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆಯನ್ನು ನಿವಾರಿಸುವ ಉದ್ದೇಶದಿಂದ, ಗಿರಿಜನ, ಗುಡ್ಡಗಾಡು ಹಾಗೂ ದುರ್ಗಮ ಪ್ರದೇಶಗಳಲ್ಲಿ ಗುತ್ತಿಗೆ ಆಧಾರದಲ್ಲಿ ಸೇವೆ ಸಲ್ಲಿಸುತ್ತಿರುವ ವೈದ್ಯರ ವೇತನ ಹೆಚ್ಚಿಸುವ ಬೇಡಿಕೆಯನ್ನು ಸರ್ಕಾರ ಪರಿಗಣಿಸಲಿದೆ ಎಂದು ಹೇಳಿದರು -ಯು ಟಿ ಖಾದರ್

## ವಿದ್ಯುತ್ ಖಾಸಗೀಕರಣ ವಿರೋಧಿಸಿ ದ್ವಾರ ಸಭೆ, ಪ್ರತಿಭಟನೆ

• **ಉದಯವಾಹಿನಿ, ಹುಬ್ಬಳ್ಳಿ:**

ಕರ್ನಾಟಕದಲ್ಲಿ ವಿದ್ಯುತ್ ಕ್ಷೇತ್ರದ ಖಾಸಗೀಕರಣ ವಿರೋಧಿಸಿ ಕವಿಪ್ರನಿನಿ ಅಧಿಕಾರಿಗಳ ಮತ್ತು ನೌಕರರ ಒಕ್ಕೂಟ (ಫೆಡರೇಶನ್) ವತಿಯಿಂದ' ವಿದ್ಯುತ್ ನಗರ ಶಾಖೆ ಹಾಗೂ ಗೋಪನಕೊಪ್ಪದಲ್ಲಿರುವ ಹೆಸ್ಕಾಂ ನಿಗಮ ಕಚೇರಿ ಎದುರು ದ್ವಾರ ಸಭೆ ಮತ್ತು ಸಾಂಕೇತಿಕ ಪ್ರತಿಭಟನೆ ನಡೆಯಿತು. ಪ್ರತಿಭಟನಾಕಾರರು ಖಾಸಗಿ ಕಂಪನಿಗಳಿಗೆ ವಿದ್ಯುತ್ ವಿತರಣಾ ಪರವಾನಿಗೆ ನೀಡಬಾರದು ಎಂದು ಆಗ್ರಹಿಸಿದರು. ಖಾಸಗೀಕರಣದಿಂದ ರೈತರು ಹಾಗೂ ಸಾಮಾನ್ಯ ಗ್ರಾಹಕರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದರು. ಹೆಸ್ಕಾಂ ವ್ಯಾಪ್ತಿಯ ಬೆಳಗಾವಿ, ಧಾರವಾಡ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ಖಾಸಗಿ ಕಂಪನಿಗಳಿಗೆ ವಿದ್ಯುತ್ ವಿತರಣೆಯ ಹಕ್ಕು ನೀಡುವ ಮನವಿಯನ್ನು ಕೆಇಆರ್‌ಸಿ ತಿರಸ್ಕರಿಸಬೇಕೆಂದು ಒತ್ತಾಯಿಸಿದರು. ವಿದ್ಯುತ್ ನಗರದಲ್ಲಿ ನಡೆದ ದ್ವಾರ ಸಭೆಯಲ್ಲಿ ಜೂನ್ 20ರೊಳಗೆ ಪ್ರತಿಯೊಬ್ಬ ನೌಕರರು ಕೆಇಆರ್‌ಸಿಗೆ ತಮ್ಮ ಆಕ್ಷೇಪಣೆ ಸಲ್ಲಿಸುವಂತೆ ತೀರ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸೇರಿದಂತೆ ವಿವಿಧ ಸಂಘಗಳ ಪದಾಧಿಕಾರಿಗಳು ಹಾಗೂ ಅಧಿಕಾರಿ-ನೌಕರರು ಉಪಸ್ಥಿತರಿದ್ದರು.

## ಸಮಾಜದಲ್ಲಿ ಅಂಗವಿಕಲರನ್ನು ಸಮಾನತೆ ಮತ್ತು ಗೌರವದಿಂದ ಕಾಣಬೇಕು

• **ಉದಯವಾಹಿನಿ, ಮರಿಯಮ್ಮನಹಳ್ಳಿ**

ಸಮಾಜದಲ್ಲಿ ಅಂಗವಿಕಲರಿಗೆ ತಮ್ಮ ಅಂಗವೈಕಲ್ಯದ ಭಾವನೆಗಳು ಬರದಂತೆ ಆತ್ಮವಿಶ್ವಾಸ ಹೆಚ್ಚಿಸುವ ಕಾರ್ಯಗಳು ಆಗಬೇಕಿದೆ ಎಂದು ಬಿ.ಎಂ.ಎಂ. ಸಂಸ್ಥೆಯ ನಿರ್ದೇಶಕ ಗಣೇಶ್ ಹೆಗಡೆ ಅಭಿಪ್ರಾಯಪಟ್ಟರು. ಅವರು ಬಿ.ಎಂ.ಎಂ.ಸಂಸ್ಥೆಯು ಆಯೋಜಿಸಿದ್ದ ಆಯ್ದ ಅಂಗವಿಕಲ ಫಲಾನುಭವಿಗಳಿಗೆ ಮೋಟಾರು ಚಾಲಿತ ತ್ರಿಚಕ್ರ ವಾಹನ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಮಾಜದಲ್ಲಿ ಅಂಗವಿಕಲರನ್ನು ಸಮಾನತೆ ಮತ್ತು ಗೌರವದಿಂದ ಕಾಣಬೇಕು. ಅಲ್ಲದೇ ಯಾವುದೇ ಭೇದ ಭಾವಗಳಿಲ್ಲದೇ ಸರಿಯಾದ ಮಾರ್ಗದರ್ಶನ ಮತ್ತು ಪ್ರೋತ್ಸಾಹ ನೀಡಬೇಕಿದೆ. ಸಾರ್ವಜನಿಕವಾಗಿ ಶಿಕ್ಷಣ, ಉದ್ಯೋಗ ಮತ್ತು ಸಾಮಾಜಿಕ ಚಟುವಟಿಕೆಗಳಲ್ಲಿ ಅವರು ಸಕ್ರೀಯವಾಗಿ ಭಾಗಿಯಾಗಲು ಸಹಕರಿಸಬೇಕು. ಅಲ್ಲದೇ ಅಂಗವಿಕಲರ ಕೌಶಲ್ಯಾಭಿವೃದ್ಧಿ ತರಬೇತಿ ಹಾಗೂ ಪೂರಕ ವಾತಾವರಣ ಕಲ್ಪಿಸುವ ಹೊಣೆ ನಮ್ಮೆಲ್ಲರ ಮೇಲಿದೆ ಎಂದರು. ಇವರಿಗೆ ಶಿಕ್ಷಣ, ಉದ್ಯೋಗ, ನೀಡುವುದರ ಜೊತೆ ಸರಕಾರದ ವಿವಿಧ ಯೋಜನೆಗಳು, ಸಹ ಸಹಕಾರಿಯಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಂಜುನಾಥ ಪ್ರಭು ಮಾತನಾಡಿದರು.

# ಮೀನುಗಾರಿಕೆಯಿಂದ ಸ್ವಸಹಾಯ ಸಂಘದ ಮಹಿಳೆಯರಿಗೆ ಉತ್ತಮ ಆದಾಯ

**ಅಲ್ಪ ಪ್ರಮಾಣದ ಕೃಷಿ ಹಾಗೂ ಕೂಲಿ ಕೆಲಸಗಳನ್ನೇ ಅವಲಂಬಿಸಿ ಜೀವನ ಸಾಗಿಸುತ್ತಿದ್ದರು.ಸಂಜೀವಿನಿ ಯೋಜನೆಯಡಿ ಅವರನ್ನು ಗುರುತಿಸಿ ಹೊಸ ಜೀವನೋಪಾಯದ ಅವಕಾಶ ಒದಗಿಸಲಾಯಿತು.**

• **ಉದಯವಾಹಿನಿ, ಗದಗ**

ಸಂಜೀವಿನಿ ಯೋಜನೆಯಡಿ ಅನುಷ್ಠಾನಗೊಂಡಿರುವ ''ಮತ್ಸ್ಯ ಸಂಜೀವಿನಿ'' ಯೋಜನೆಯು ಗದಗ ಜಿಲ್ಲೆಯ ಗ್ರಾಮೀಣ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಹೊಸ ದಿಕ್ಕು ತೋರಿಸಿದೆ. ತಾಲ್ಲೂಕಿನ ಹಾತಲಗೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಸಂಬಾಪುರ ಗ್ರಾಮದ ಪ್ರಕೃತಿ ಸಂಜೀವಿನಿ ಮಹಿಳಾ ಸ್ವಸಹಾಯ

**1 : ಹೋರಾಟದಿಂದ ಆರಂಭವಾದ ಪಯಣ**
**2 : ಕೆರೆಯಿಂದ ಆರಂಭವಾದ ಹೊಸ ಬದುಕು**
**3 : ಆತ್ಮವಿಶ್ವಾಸದ ಹೊಸ ಅಧ್ಯಾಯ**

ಸಂಘದ ಸದಸ್ಯರು ಮೀನು ಸಾಕಾಣಿಕೆ ಮೂಲಕ ಉತ್ತಮ ಆದಾಯ ಗಳಿಸಿ ಇತರ ಮಹಿಳೆಯರಿಗೆ ಮಾದರಿಯಾಗಿದ್ದಾರೆ. ಜಿಲ್ಲೆಯಾದ್ಯಂತ 16 ಗ್ರಾಮ ಪಂಚಾಯತ್ ಮಟ್ಟದ ಕೆರೆಗಳನ್ನು ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟಗಳ ಮೂಲಕ ಗುತ್ತಿಗೆ ಪಡೆದು ಸ್ವಸಹಾಯ ಸಂಘಗಳ ಸದಸ್ಯರಿಗೆ ಮೀನುಗಾರಿಕೆ ಚಟುವಟಿಕೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಈ ಮಹತ್ವಾಕಾಂಕ್ಷಿ ಯೋಜನೆಯಡಿ ಹಾತಲಗೇರಿ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟ ಹಾಗೂ ಪ್ರಕೃತಿ ಸಂಜೀವಿನಿ ಮಹಿಳಾ ಸ್ವಸಹಾಯ ಸಂಘದ ಸದಸ್ಯರು



ಕೈಜೋಡಿಸಿ ಯಶಸ್ವಿ ಮೀನುಗಾರಿಕೆ ಮಾದರಿಯನ್ನು ನಿರ್ಮಿಸಿದ್ದಾರೆ. ಪ್ರಕೃತಿ ಸಂಜೀವಿನಿ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಸೇರಿದವರಾಗಿದ್ದು, ಅಲ್ಪ ಪ್ರಮಾಣದ ಕೃಷಿ ಹಾಗೂ ಕೂಲಿ ಕೆಲಸಗಳನ್ನೇ ಅವಲಂಬಿಸಿ ಜೀವನ ಸಾಗಿಸುತ್ತಿದ್ದರು. ಕುಟುಂಬದ ಅಗತ್ಯಗಳನ್ನು ಪೂರೈಸುವುದು ಕೂಡ ಸವಾಲಾಗಿದ್ದ ಸಂದರ್ಭದಲ್ಲಿ ಸಂಜೀವಿನಿ ಯೋಜನೆಯಡಿ ಅವರನ್ನು ಗುರುತಿಸಿ ಹೊಸ ಜೀವನೋಪಾಯದ ಅವಕಾಶ ಒದಗಿಸಲಾಯಿತು. ಕಳೆದ ವರ್ಷ 2025 ರಲ್ಲಿ ಜಿಲ್ಲಾ ಪಂಚಾಯತ್ ಗದಗ ಜಿಲ್ಲಾ ಸಂಪನ್ಮೂಲ ಕೇಂದ್ರ, ಹುಲಕೋಟೆಯಲ್ಲಿ ಗದಗ ಮೀನುಗಾರಿಕೆ ಇಲಾಖೆಯ ಸಹಯೋಗದೊಂದಿಗೆ ಮೂರು ದಿನಗಳ ವಸತಿ ಸಹಿತ ವಿಶೇಷ ತರಬೇತಿ ನೀಡಲಾಗಿತ್ತು. ತರಬೇತಿಯಲ್ಲಿ ಮೀನು ಸಾಕಾಣಿಕೆಯ ವೈಜ್ಞಾನಿಕ ವಿಧಾನಗಳು, ಕೆರೆ ನಿರ್ವಹಣೆ, ಮೀನುಗಳ ಪೋಷಣೆ, ಆಹಾರ ನಿರ್ವಹಣೆ ಹಾಗೂ ಮಾರುಕಟ್ಟೆ ಸಂಪರ್ಕದ ಕುರಿತು ಸಮಗ್ರ ಮಾಹಿತಿ ನೀಡಿದ್ದರು.

ತರಬೇತಿ ಪೂರ್ಣಗೊಂಡ ಬಳಿಕ ಹಾತಲಗೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಅಮೃತ ಸರೋವರ ಯೋಜನೆಯಡಿ ನಿರ್ಮಿಸಲಾದ ಕೆರೆಯನ್ನು ನಿಯಮಾನುಸಾರ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟ ಗುತ್ತಿಗೆ ಪಡೆದುಕೊಂಡಿತು.

ನಂತರ ಒಕ್ಕೂಟ ಮತ್ತು ಪ್ರಕೃತಿ ಸಂಜೀವಿನಿ ಮಹಿಳಾ ಸ್ವಸಹಾಯ ಸಂಘದ ನಡುವೆ ಒಪ್ಪಂದ ಮಾಡಿಕೊಂಡು ಮೀನುಗಾರಿಕೆ ಚಟುವಟಿಕೆಗೆ ಚಾಲನೆ ನೀಡಲಾಯಿತು.

ಮೀನುಗಾರಿಕೆ ಇಲಾಖೆಯ ಮಾರ್ಗದರ್ಶನದಲ್ಲಿ ಸುಮಾರು 12,000 ಕಟ್ಲಾ ಮತ್ತು ರೋಹು ಮೀನು ಮರಿಗಳನ್ನು ಕೆರೆಗೆ ಬಿಡಲಾಯಿತು. ಸುಮಾರು ಎಂಟು ರಿಂದ ಒಂಬತ್ತು ತಿಂಗಳ ನಿರಂತರ ಪರಿಶ್ರಮದ ನಂತರ ಕೆರೆಯಲ್ಲಿ ಬೆಳೆದ ಮೀನುಗಳನ್ನು ಕೊಯ್ಲು ಮಾಡಲಾಯಿತು. ಮೊದಲ ಹಂತದ ಕೊಯ್ಲಿನಲ್ಲಿ ಸುಮಾರು 60 ಕೆ.ಜಿ. ಮೀನುಗಳನ್ನು ಸಂಗ್ರಹಿಸಿ ಸ್ಥಳೀಯ ಮಾರುಕಟ್ಟೆಯಲ್ಲಿ ಪ್ರತಿ ಕೆ.ಜಿಗೆ 65 ದರದಲ್ಲಿ ಮಾರಾಟ ಮಾಡಲಾಯಿತು. ಮೀನುಗಳ ತೂಕ ಸರಾಸರಿ 700 ಗ್ರಾಂನಿಂದ 1 ಕೆ.ಜಿ.ವರೆಗೆ ಇತ್ತು. ಮೀನು ಮಾರಾಟದಿಂದ ದೊರೆತ ಆದಾಯ ಮಹಿಳೆಯರ ಕುಟುಂಬಗಳ ಆರ್ಥಿಕ ಸ್ಥಿತಿ ಸುಧಾರಿಸಲು ನೆರವಾಗಿದೆ.

> ಸಿದ್ದು ಸತ್ಯನ್ನವರ ಅಶ್ವಿನಿ ಪಾಟೀಲ, ಕೃಷಿ ಸಖಿಯರು ಹಾಗೂ ಪಶು ಸಖಿಯರು ನಿರಂತರ ತಾಂತ್ರಿಕ ಸಲಹೆ ಮತ್ತು ಮಾರ್ಗದರ್ಶನ ನೀಡಿದರು. ಮಹಿಳೆಯರು ಪ್ರತಿದಿನ ಕೆರೆಯ ನಿರ್ವಹಣೆ, ಮೀನುಗಳಿಗೆ ಆಹಾರ ಒದಗಿಸುವುದು ಹಾಗೂ ಬೆಳವಣಿಗೆಯ ಮೇಲ್ವಿಚಾರಣೆ ಮಾಡುವ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸಿದರು.
> -ತಾಲ್ಲೂಕು ಸಂಜೀವಿನಿ ಯೋಜನೆ ಅಧಿಕಾರಿ

**ಸಾರ್ವಜನಿಕ ಸಂಪನ್ಮೂಲವಾಗಿದ್ದ ಕೆರೆ**

ಮತ್ಸ್ಯ ಸಂಜೀವಿನಿ ಯೋಜನೆಯು ಕೇವಲ ಆದಾಯವನ್ನಷ್ಟೇ ನೀಡದೆ ಮಹಿಳೆಯರಲ್ಲಿ ಆತ್ಮವಿಶ್ವಾಸ, ನಾಯಕತ್ವ ಗುಣ, ಸ್ವಾವಲಂಬನೆ ಮತ್ತು ಉದ್ಯಮಶೀಲತೆಯ ಮನೋಭಾವವನ್ನು ಬೆಳೆಸಿದೆ. ಸಾರ್ವಜನಿಕ ಸಂಪನ್ಮೂಲವಾಗಿದ್ದ ಕೆರೆಯನ್ನು ಸಮುದಾಯದ ಆರ್ಥಿಕ ಅಭಿವೃದ್ಧಿಗೆ ಬಳಸಿಕೊಂಡಿರುವುದು ಗ್ರಾಮೀಣ ಅಭಿವೃದ್ಧಿಯ ಉತ್ತಮ ಉದಾಹರಣೆಯಾಗಿದೆ.

## ಮಿನಿ ನ್ಯೂಸ್

### ಬಿಐಇಆರ್‌ಟಿ ಹುದ್ದೆಗೆ ಅರ್ಜಿ ಆಹ್ವಾನ

• **ಉದಯವಾಹಿನಿ, ಚಿತ್ರದುರ್ಗ**

2026-27ನೇ ಸಾಲಿಗೆ ಚಿತ್ರದುರ್ಗ ಜಿಲ್ಲೆಯಲ್ಲಿ ಖಾಲಿ ಇರುವ ಪ್ರಾಥಮಿಕ ಬಿಐಇಆರ್‌ಟಿ ಹಾಗೂ ಪ್ರೌಢ ಬಿಐಇಆರ್‌ಟಿ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ನೇರಗುತ್ತಿಗೆ ಮೂಲಕ ತಾತ್ಕಾಲಿಕ ಸೇವೆ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಜೂನ್ 18 ಅರ್ಜಿ ಸಲ್ಲಿಸಲು ಕೊನೆಯ ದಿನ ಪ್ರಾಥಮಿಕ ಬಿಐಇಆರ್‌ಟಿ ಹುದ್ದೆಗೆ ಡಿ.ಇಡಿ ಇನ್ ಸ್ಪೆಷಲ್ ಎಜುಕೇಷನ್ ಜೊತೆಗೆ ಮತ್ತು ಪ್ರೌಢ ಬಿಐಇಆರ್‌ಟಿ ಹುದ್ದೆಗೆ ಬಿ.ಇಡಿ ಇನ್ ಸ್ಪೆಷಲ್ ಎಜುಕೇಷನ್ ಜೊತೆಗೆ ಹೊಂದಿರುವ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತ ಅಭ್ಯರ್ಥಿಗಳು ಜೂನ್ 18ರ ಸಂಜೆ 5 ಗಂಟೆಯೊಳಗೆ ಭರ್ತಿ ಮಾಡಿದ ದೃಢೀಕೃತ ದಾಖಲೆಗಳೊಂದಿಗೆ ಅರ್ಜಿಯನ್ನು ಮುದ್ದಾಂ ಉಪನಿರ್ದೇಶಕರು (ಆಡಳಿತ) ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾಧಿಕಾರಿ, ಸಮಗ್ರ ಶಿಕ್ಷಣ ಕರ್ನಾಟಕ, ಶಾಲಾ ಶಿಕ್ಷಣ ಇಲಾಖೆ, ಚಿತ್ರದುರ್ಗ ಈ ಕಚೇರಿಗೆ ಸಲ್ಲಿಸಬಹುದು. ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ ತಿಳಿಸಿದ್ದಾರೆ.

### ಬಿತ್ತನೆ ಕ್ಷೇತ್ರ 82ಸಾವಿರ ಹೇಕ್ಟರ್ ಪ್ರದೇಶ ಗುರಿ


ಉದಯವಾಹಿನಿ ಚಿತ್ರ

• **ಉದಯವಾಹಿನಿ** ಚಿಂಚೋಳಿ:

ತಾಲ್ಲೂಕಿನಲ್ಲಿ ಬಿತ್ತನೆ ಬೀಜಗಳಾದ ಸೋಯಾಬಿನ್, ಉದ್ದು, ಹೆಸರು,ತೋಗರಿ, ರಸಗೊಬ್ಬರ ಯಾವುದೇ ಕೊರತೆ ಇಲ್ಲ,ಸಾಕಷ್ಟು ದಾಸ್ತಾನುವಿದೆ ಈಗಾಗಲೇ ಶೇಕಡಾ 80ಪ್ರತಿಶತಃದಷ್ಟು ಬಿತ್ತನೆ ಬೀಜ ವಿತರಣೆ ಮಾಡಲಾಗಿದೆ ಎಂದು ಸಹಾಯಕ ಕೃಷಿ ನಿರ್ದೇಶಕ ವೀರಶೆಟ್ಟಿ ರಾಠೋಡ್ ತಿಳಿಸಿದ್ದಾರೆ.

ತಾಲ್ಲೂಕಿನಲ್ಲಿ 82ಸಾವಿರ ಹೇಕ್ಟರ್ ಪ್ರದೇಶ ಬಿತ್ತನೆ ಗುರಿ ಹೊಂದಲಾಗಿದೆ,ತೋಗರಿ 58ಸಾವಿರ ಹೇಕ್ಟರ್ ಪ್ರದೇಶ,ಹೆಸರು 10ಸಾವಿರ ಹೇಕ್ಟರ್ ಪ್ರದೇಶ,ಸೋಯಾಬಿನ್ 07ಸಾವಿರ ಹೇಕ್ಟರ್ ಪ್ರದೇಶ,ಉದ್ದು 03ಸಾವಿರ ಹೇಕ್ಟರ್ ಪ್ರದೇಶ,ಇತರೆ 04ಸಾವಿರ ಹೇಕ್ಟರ್ ಪ್ರದೇಶ ಬಿತ್ತನೆ ಗುರಿ ಹೊಂದಲಾಗಿದ್ದು ಈಗಾಗಲೇ ಬೀಜ ವಿತರಣೆ ಮಾಡಲಾಗಿದೆ.

ರೈತರು ಜಮೀನಿನ ತೇವಾಂಶ ನೋಡಿ ಬಿತ್ತನೆಗೆ ಮುಂದಾಗಬೇಕು,ಇನ್ನು ಬಿತ್ತನೆ ಮಾಡುವಷ್ಟು ಮಳೆ ಆಗಿಲ್ಲ,ರೈತರು ಬಿತ್ತನೆ ಮಾಡಬಾರದು,ಮೊಳಕೆ ಒಡೆಯುವುದಿಲ್ಲ,ಭೂಮಿಯ ತೇವಾಂಶ ನೋಡಿ ಇನ್ನು ಒಂಡೆರಡು ಮಳೆ ಬಂದನಂತರ ಬಿತ್ತನೆ ಮಾಡಬೇಕು,ರಸಗೊಬ್ಬರ ಸೂಸೈಟಿಗಳ ಮೂಲಕ ವಿತರಣೆ ಮಾಡುವುದು ಪ್ರಗತಿಯಲ್ಲಿದೆ ಎಂದರು.ಕೃಷಿ ಅಧಿಕಾರಿ ಇಮ್ರಾನ್ ಅಲಿ,ಚಾಂದ್ ಪಟೇಲ್ ಅಣವಾರ ಸೇರಿದಂತೆ ಅನೇಕ ರೈತರಿದ್ದರು.

### ಪರೀಕ್ಷೆ ಫಲಿತಾಂಶ ಹಗರಣ ಖಂಡಿಸುತ್ತಾ ಕ್ರಮ ಕೈಗೊಳ್ಳಲು ಎಬಿವಿಪಿ ಆಗ್ರಹ.




• **ಉದಯವಾಹಿನಿ, ಬಳ್ಳಾರಿ,**

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯವು ಭ್ರಷ್ಟಾಚಾರಿಗಳ ತವರು ಮನೆಯಾಗಿದೆ. ಪರೀಕ್ಷಾ ಫಲಿತಾಂಶವನ್ನು ಪ್ರಕಟಿಸಿದ ನಂತರವೂ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಂದ ಹಣ ಪಡೆದು, ಅವರನ್ನು ಉತ್ತೀರ್ಣಗೊಳಿಸುತ್ತಿರುವುದು ಕಂಡುಬಂದಿರುತ್ತದೆ ಎಂದು ಎಬಿವಿಪಿ ಆರೋಪಿಸಿದೆ. ಈ ಹಗರಣದಲ್ಲಿ ರಿಯಾಜ್, ವೆಂಕಟೇಶ್ ವನದುರ್ಗ, ಯಲ್ಲಾಲಿಂಗ, ಚಂದ್ರಮೋಹನ್, ಉಮೇಶ್ ಹಾಗೂ ಇತರರು ಒಳಗೊಂಡಂತೆ ಪರೀಕ್ಷೆ ಫಲಿತಾಂಶ ಬಿಡುಗಡೆ ಮಾಡುವ ಸಮಯದಲ್ಲಿ ಪಿ.ಜಿ. ಅಥವಾ ಡಿಗ್ರಿ ವಿದ್ಯಾರ್ಥಿಗಳ ಕೋಡಿಂಗ್-ಡಿಕೋಡಿಂಗ್ ಅಂಕಗಳನ್ನು ಅಂಕಗಳನ್ನು ನಮೂದಿಸುವುದು ಇವರೇ ನೋಡಿಕೊಳ್ಳುತ್ತಾರೆ. ಈ ಅವ್ಯವಹಾರವು ತುಂಬಾ ದಿನಗಳಿಂದ ನಡೆಯುತ್ತಿದ್ದು, ಈಗ ಸಾಕ್ಷ್ಯಾಧಾರಗಳ ಸಮೇತ ಬೆಳಕಿಗೆ ಬಂದಿದೆ. ವೆಂಕಟೇಶ ವನದುರ್ಗ, ರಿಯಾಜ್ ಇವರನ್ನೊಳಗೊಂಡಂತೆ ಅನುತ್ತೀರ್ಣರಾದ ವಿದ್ಯಾರ್ಥಿಗಳಿಂದ ಹಣ ಪಡೆದು ಉತ್ತೀರ್ಣಗೊಳಿಸಿದ್ದಾರೆ. ಆದರೆ ಇವರು ಮಾಡುತ್ತಿರುವ ಈ ಅವ್ಯವಹಾರದಿಂದ ಬುದ್ಧಿವಂತ ಬಡ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದೆ. ಹೀಗೆ ಹಣದಿಂದ ಪದವಿಯನ್ನು ಪಡೆದುಕೊಳ್ಳುವುದಾದರೆ ದಿನವಿಡೀ ಕಾಲೇಜುಗಳಿಗೆ ಬಂದು ಪಾಠ ಕೇಳಿ ಪರೀಕ್ಷೆ ಬರೆದ ವಿದ್ಯಾರ್ಥಿಗಳ ಗತಿ ಏನು? ಮುಂದುವರೆದು, ವಿಶ್ವವಿದ್ಯಾಲಯದ ಪರೀಕ್ಷಾಂಗ ವಿಭಾಗದ ಅಧಿಕಾರಿಗಳು ಈವರೆಗೂ ಪರೀಕ್ಷಾ ಕಾರ್ಯಗಳಿಗೆ ಇವರುಗಳನ್ನೇ ನೇಮಿಸಿರುತ್ತಾರೆ. ಹಾಗಾಗಿ ಈ ವ್ಯವಹಾರದಲ್ಲಿ ಭಾಗಿಗಳಾದ ಎಲ್ಲಾ ಭ್ರಷ್ಟಾಚಾರಿಗಳನ್ನು ಕೂಡಲೇ ಅಮಾನತ್ತುಗೊಳಿಸಿ, ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ಮಾನ್ಯ ಕುಲಪತಿಗಳು, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ ಇವರಿಗೆ ಮನವಿ ಸಲ್ಲಿಸಿ ಆಗ್ರಹಿಸಲಾಯಿತು.

### ಕೆಎಸ್‌ಆರ್‌ಟಿಸಿ ಬಸ್ ಚಾಲನೆ

• **ಉದಯವಾಹಿನಿ, ರಾಣೆಬೆನ್ನೂರು:**

ತಾಲ್ಲೂಕಿನ ಕರೂರು ಗ್ರಾಮ ದಸರಾ ಉತ್ಸವ ಸಮಿತಿಯ ಒತ್ತಾಸೆಯ ಮೇರೆಗೆ ಕರೂರಿನಿಂದ ಹರಿಹರ ಪಟ್ಟಣಕ್ಕೆ ತೆರಳಲು ನೂತನ ಬಸ್ ಸಂಚಾರ ಮಾರ್ಗಕ್ಕೆ ಕೆಎಸ್‌ಆರ್‌ಟಿಸಿ ಬಸ್‌ಗೆ ಶಾಸಕ ಪ್ರಕಾಶ ಕೋಳಿವಾಡ ಅವರು ಈಚೆಗೆ ಚಾಲನೆ ನೀಡಿದರು.

ಗ್ರಾಮ ಪಂಚಾಯಿತಿ ಪಿಡಿಒ ನಾಗೇಂದ್ರ, ನಾಯಕ, ಘಟಕ ವ್ಯವಸ್ಥಾಪಕ ಆರ್.ಸಿ.ಪಾಟೀಲ, ಬಸವರಾಜ ಓಲೇಕಾರ, ಬಸವರಾಜ ರಾಜನಹಳ್ಳಿ, ಗಿರೀಶ ರಾಮನಗೌಡ್ರ, ಮಂಜುನಾಥ ಭಾಗವಹಿಸಿದ್ದರು.

